₹ 4 | ಪುಟ: 4 | ಸಂಪುಟ: 4 | ಸಂಚಿಕೆ 95 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ
ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
Volume : 4 | Issue: 95 | Sunday, 28, MAY, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

# ನೂತನ ಸಚಿವರಿಗೆ ಖಾತೆ ಹಂಚಿಕೆ

## ಆಡಳಿತಕ್ಕೆ ಹೊಸ ರೂಪ ಕೊಡುವ ತೀರ್ಮಾನ | ಸಚಿವ ಸಂಪುಟದ ಎಲ್ಲ 34 ಸ್ಥಾನ ಭರ್ತಿ: ಸಿಎಂ



ಬೆಂಗಳೂರು: ಸಚಿವ ಸಂಪುಟದ ಎಲ್ಲ 34 ಸ್ಥಾನಗಳನ್ನು ಭರ್ತಿ ಮಾಡಲಾಗಿದ್ದು, ಆಡಳಿತಕ್ಕೆ ಹೊಸ ರೂಪ ಕೊಡುವ ತೀರ್ಮಾನ ಮಾಡಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರು ಶನಿವಾರ ವಿಧಾನಸೌಧದಲ್ಲಿ ಸಚಿವ ಸಂಪುಟದ ಅನೌಪಚಾರಿಕ ಸಭೆಯ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ರಾಜ್ಯದಲ್ಲಿ ಪೂರ್ಣ ಪ್ರಮಾಣದ ಸಚಿವ ಸಂಪುಟ ರಚಿಸಲಾಗಿದೆ. ಮುಖ್ಯಮಂತ್ರಿ ಹೊರತುಪಡಿಸಿ, 33 ಸ್ಥಾನಗಳನ್ನೂ ಭರ್ತಿ ಮಾಡಲಾಗಿದೆ. ಖಾತೆ ಹಂಚಿಕೆ ಇವತ್ತು ಅಥವಾ ನಾಳೆ ಮಾಡಲಾಗುವುದು ಎಂದು ತಿಳಿಸಿದರು.

ಸಚಿವ ಸಂಪುಟದ ಸ್ವರೂಪದ ಕುರಿತು ವಿವರಿಸಿದ ಮುಖ್ಯಮಂತ್ರಿಗಳು, ಸಚಿವ ಸಂಪುಟವು ಹೊಸ ಹಾಗೂ ಹಳೆ ಮುಖಗಳ ಸಮ್ಮಿಶ್ರಣವಾಗಿದೆ.

ಮೊದಲ ಬಾರಿ ಗೆದ್ದವರನ್ನು ಮಂತ್ರಿ ಮಾಡಿಲ್ಲ ಎಂದರು.

ಸರ್ಕಾರ ನಾವು ಕೊಟ್ಟಿರುವ ಭರವಸೆ ಈಡೇರಿಸಬೇಕು. ಜನ ಹೊಸ ಬದಲಾವಣೆ ಬಯಸಿದ್ದಾರೆ. ಅದರಿಂದ ಆಡಳಿತಕ್ಕೆ ಹೊಸ ರೂಪ ಕೊಡುವ ದೃಷ್ಟಿಯಿಂದ ಈ ಸಚಿವರ ಸಂಪುಟ ರಚಿಸಲಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ವಿರೋಧ ಪಕ್ಷಗಳು ತಾವು ಕೊಟ್ಟ ವಚನ ಈಡೇರಿಸಿಲ್ಲ. ನಾವು ಹಿಂದೆಯೂ ನಮ್ಮ ವಚನ ಈಡೇರಿಸಿದ್ದೇವೆ. ಈಗಲೂ ಈಡೇರಿಸುತ್ತೇವೆ.

ಐದು ಗ್ಯಾರಂಟಿಗಳ ಕುರಿತು ಮುಂದಿನ ಸಚಿವ ಸಂಪುಟದಲ್ಲಿ ವಿವರಗಳನ್ನು ಮಂಡಿಸಲು ಸೂಚಿಸಲಾಗಿದೆ.

ಈ ಕುರಿತು ಚರ್ಚಿಸಿ ಅನುಮೋದನೆ ನೀಡಿ ಶೀಘ್ರವೇ ಅವುಗಳನ್ನು ಜಾರಿಗೆ ತರಲಾಗುವುದು ಎಂದು ತಿಳಿಸಿದರು.

ಕೊಡಗು, ಹಾವೇರಿ, ಹಾಸನ , ಚಿಕ್ಕಮಗಳೂರು ಮತ್ತಿತರ ಜಿಲ್ಲೆಗಳಿಗೆ ಪ್ರಾತಿನಿಧ್ಯ ಲಭಿಸಿಲ್ಲ. ಕೆಲವು ಮಾನದಂಡಗಳನ್ನು ಅನುಸರಿಸುವಾಗ ಕೆಲವು ಜಿಲ್ಲೆಗಳಿಗೆ ಪ್ರಾತಿನಿಧ್ಯ ದೊರೆತಿಲ್ಲ.

ಉದಾಹರಣೆಗೆ ಕೊಡಗು ಜಿಲ್ಲೆಯಲ್ಲಿ ಇಬ್ಬರೂ ಮೊದಲ ಬಾರಿ ಶಾಸಕರಾಗಿದ್ದಾರೆ.

ಹಾಗಾಗಿ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ನೀಡಲು ಸಾಧ್ಯವಾಗಿಲ್ಲ ಎಂದು ನುಡಿದರು.

ಪುಟ್ಟರಂಗಶೆಟ್ಟಿ ಅವರು ವಿಧಾನ ಸಭೆಯ ಉಪಾಧ್ಯಕ್ಷ ಹುದ್ದೆಯನ್ನು ಒಪ್ಪಿಕೊಂಡಿಲ್ಲ ಎಂಬ ಕುರಿತ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, ಅಸಮಾಧಾನ ಸಮಾಧಾನ ಯಾವಾಗಲೂ ಇರುತ್ತದೆ. ಅಸಮಾಧಾನದಲ್ಲಿ ಸಮಾಧಾನವಿರುತ್ತದೆ. ಅವರೊಂದಿಗೆ ನಾನು ನಿನ್ನೆ ರಾತ್ರಿಯೇ ಮಾತನಾಡಿದ್ದೇನೆ. ಅವರು ಒಪ್ಪಿಕೊಂಡಿದ್ದಾರೆ ಎಂದು ಸ್ಪಷ್ಟಪಡಿಸಿದರು.

## ಗ್ಯಾರಂಟಿಗಳ ಅನುಷ್ಠಾನಕ್ಕೆ ಎಲ್ಲ ಸ್ಥಾನ ಭರ್ತಿ: ಸಿದ್ದರಾಮಯ್ಯ



ಬೆಂಗಳೂರು: ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷವು ಮತದಾರರಿಗೆ ನೀಡಿದ್ದ ಗ್ಯಾರಂಟಿಗಳನ್ನು ತ್ವರಿತವಾಗಿ ಅನುಷ್ಠಾನಕ್ಕೆ ತರುವ ಉದ್ದೇಶದಿಂದ ಸಂಪುಟದಲ್ಲಿನ ಎಲ್ಲ ಸ್ಥಾನಗಳನ್ನು ಭರ್ತಿ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಸಂಪುಟ ವಿಸ್ತರಣೆ ಬಳಿಕ ವಿಧಾನಸೌಧದಲ್ಲಿ ಸಂಪುಟ ಸಭೆ ನಡೆಸಿದರು. ಬಳಿಕ ಪತ್ರಕರ್ತರ ಜತೆ ಮಾತನಾಡಿದ ಅವರು, ಗ್ಯಾರಂಟಿಗಳನ್ನು ಜಾರಿ ಮಾಡುವ ಕುರಿತು ಮುಂದಿನ ಸಂಪುಟ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ಇದು ಹೊಸಬರು ಮತ್ತು ಹಳಬರ ಮಿಶ್ರಣದ ಸಂಪುಟ. ಮೊದಲ ಬಾರಿ ಗೆದ್ದು ಬಂದಿರುವ ಯಾರನ್ನೂ ಸಂಪುಟಕ್ಕೆ ಸೇರಿಸಿಕೊಂಡಿಲ್ಲ. ಹೀಗಾಗಿ ಕೆಲವು ಜಿಲ್ಲೆಗಳಿಗೆ ಸಂಪುಟದಲ್ಲಿ ಪ್ರಾತಿನಿಧ್ಯ ಸಿಕ್ಕಿಲ್ಲ ಎಂದು ಹೇಳಿದರು. ಸಂಪುಟ ವಿಸ್ತರಣೆಯಂತಹ ಸಂದರ್ಭದಲ್ಲಿ ಸಮಾಧಾನ, ಅಸಮಾಧಾನ ಸಹಜ. ಎಲ್ಲವೂ ಸರಿಹೋಗುತ್ತದೆ ಎಂದರು.



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ಭಾರತದ ಪ್ರಪ್ರಥಮ ಪ್ರಧಾನಮಂತ್ರಿ ಪಂಡಿತ್ ಜವಾಹರಲಾಲ್ ನೆಹರೂ ಅವರ 59ನೇಯ ಪುಣ್ಯತಿಥಿಯ ಅಂಗವಾಗಿ ವಿಧಾನಸೌಧದ ಆವರಣದಲ್ಲಿರುವ ಅವರ ಪ್ರತಿಮೆಯ ಬಳಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

## ಗ್ಯಾರಂಟಿ ಅನುಷ್ಠಾನಕ್ಕೆ ತಂದರೆ ಬಿಜೆಪಿಯ ಅಸ್ತಿತ್ವವೇ ಮಾಯ: ಸಚಿವ ಈಶ್ವರ ಖಂಡ್ರೆ




ಬೆಂಗಳೂರು: ಗ್ಯಾರಂಟಿ ಅನುಷ್ಠಾನಕ್ಕೆ ತಂದರೆ ನಾಳೆ ಬಿಜೆಪಿಯ ಅಸ್ತಿತ್ವವೇ ಕಳೆದುಹೋಗುತ್ತದೆ. ಮುಂದೆ 25 ವರ್ಷಗಳವರೆಗೆ ಅವರಿಗೆ ಅವಕಾಶ ಸಿಗುವುದಿಲ್ಲ ಎನ್ನುವ ಭಯದಲ್ಲಿ ಜನರಲ್ಲಿ ಒಂದು ರೀತಿಯಲ್ಲಿ ಅನುಮಾನ ಹುಟ್ಟಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಸಚಿವ ಈಶ್ವರ ಖಂಡ್ರೆ ಬಿಜೆಪಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಫೋಸ್ಟ್ ಕ್ಯಾಬಿನೆಟ್‌ನಲ್ಲಿಯೇ ಗ್ಯಾರಂಟಿ ಯೋಜನೆಗಳಿಗೆ ಒಪ್ಪಿಗೆ ಕೊಡಬೇಕಿತ್ತು ಎಂಬ ಬಿಜೆಪಿ ಹೇಳಿಕೆಗೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ಯಾರಂಟಿ ಜಾರಿಗೆ ತರುವುದರಲ್ಲಿ ಯಾವುದೇ ಗೊಂದಲವಿಲ್ಲ. ನಾವು ಏನು ಹೇಳಿದ್ದೇವೆ ಅದನ್ನು ಅನುಷ್ಠಾನ ಮಾಡಿ ಜಾರಿಗೆ ತರುತ್ತೇವೆ. ಬಿಜೆಪಿಯವರು ಹೊಟ್ಟೆಕಿಚ್ಚಿನಿಂದ ಈ ರೀತಿಯಾಗಿ ಹೇಳುತ್ತಿದ್ದಾರೆ. ಜನರಿಗೆ ಪ್ರಚೋದನೆ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ವಿದ್ಯುತ್ ಬಿಲ್ ಕಟ್ಟಲ್ಲ ಎಂಬ ಜನರ ಆಕ್ರೋಶದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಜನರು ಸ್ವಲ್ಪ ಅರ್ಥ ಮಾಡಿಕೊಳ್ಳಬೇಕು.

ಜನರು ಈಗ ಕಟ್ಟುತ್ತಿರುವುದು ಹಳೆಯ ಬಿಲ್. ಅದು ಏಪ್ರಿಲ್ ತಿಂಗಳಿನ ಬಿಲ್ ಆಗಿದ್ದು, ಮೇ ತಿಂಗಳಿನಲ್ಲಿ ಬರುತ್ತಿದೆ. ಮೇ ತಿಂಗಳಿನ ಬಿಲ್ ಜೂನ್‌ನಲ್ಲಿ ಬರುತ್ತದೆ. ನಮ್ಮ ಸರ್ಕಾರ ಈಗ ಅಸ್ತಿತ್ವದಲ್ಲಿದೆ. ಜೂನ್‌ನಿಂದ ಗ್ಯಾರಂಟಿ ಅನುಷ್ಠಾನವಾದರೇ ಜುಲೈನಲ್ಲಿ ಬಿಲ್ ಬರುತ್ತೆ. 200 ಯೂನಿಟ್ ಒಳಗಡೆ ಇರುವವರು ಯಾರೂ ಬಿಲ್ ಕಟ್ಟುವ ಅವಶ್ಯಕತೆಯಿಲ್ಲ ಎಂದು ಸ್ಪಷ್ಟನೆ ನೀಡಿದರು.

## ಇಂದು ನೂತನ ಸಂಸತ್ ಭವನ ಉದ್ಘಾಟನೆ: ರಾಷ್ಟ್ರ ರಾಜಧಾನಿಯಲ್ಲಿ ಬಿಗಿ ಭದ್ರತೆ



ನವದೆಹಲಿ: ಇಂದು ನೂತನ ಸಂಸತ್ ಭವನ ಉದ್ಘಾಟನಾ ಸಮಾರಂಭದ ಹಿನ್ನೆಲೆಯಲ್ಲಿ ರಾಷ್ಟ್ರ ರಾಜಧಾನಿಯಲ್ಲಿ ಪೊಲೀಸರು ಬಿಗಿ ಭದ್ರತೆ ಒದಗಿಸಿದ್ದಾರೆ. ನೂತನ ಕಟ್ಟಡದ ಸುತ್ತಲೂ ಸುಮಾರು 70 ಪೊಲೀಸರನ್ನು ನಿಯೋಜಿಸಲಾಗಿದೆ.

ಕಾನೂನು ಸುವ್ಯವಸ್ಥೆ ಕಾಪಾಡಲು ಮತ್ತಷ್ಟು ಪೊಲೀಸರನ್ನು ನಿಯೋಜಿಸಲಾಗುವುದು ಎಂದು ದೆಹಲಿ ಪೊಲೀಸ್ ವಿಶೇಷ ಸಿಪಿ ದೀಪೇಂದರ್ ಪಾಠಕ್ ಎಎನ್ಐ ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ. ನಾಳಿನ ಕಾರ್ಯಕ್ರಮ ಮತ್ತು ಕಾನೂನು ಸುವ್ಯವಸ್ಥೆಯತ್ತ ಸಂಪೂರ್ಣ ಗಮನ ಹರಿಸಲಾಗಿದೆ. ಸಾಕಷ್ಟು ಪೊಲೀಸರ ನಿಯೋಜನೆಗೆ ಖಚಿತಪಡಿಸಿಕೊಳ್ಳಲಾಗುವುದು ಎಂದು ಅವರು ಹೇಳಿದ್ದಾರೆ.

ಕಾರ್ಯಕ್ರಮ ದಿನದಂದು ಕೆಲವು ಕಿಡಿಗೇಡಿಗಳು ಕ್ಯಾಂಪಸ್ ಗೋಡೆಗಳ ಮೇಲೆ "ರಾಷ್ಟ್ರ ವಿರೋಧಿ ಮತ್ತು ಪ್ರಧಾನಿ ವಿರೋಧಿ" ಘೋಷಣೆ ಅಂಟಿಸಬಹುದು ಎಂಬ ಮಾಹಿತಿ ಹಿನ್ನೆಲೆಯಲ್ಲಿ ನೂತನ ಸಂಸತ್ ಭವನದ ಸುತ್ತ 24 ಗಂಟೆಯೂ ಬಿಗಿ ಭದ್ರತೆಯನ್ನು ನಿಯೋಜಿಸಲು ಪೊಲೀಸರು ನಿರ್ಧರಿಸಿದ್ದಾರೆ.

ಸಹಾಯಕ ಪೊಲೀಸ್ ಕಮಿಷನರ್ ಶ್ರೇಣಿಯ ಅಧಿಕಾರಿಗಳು ಸಿಸಿಟಿವಿ ಕಣ್ಗಾವಲು ಮೂಲಕ ಇಡೀ ಪರಿಸ್ಥಿತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ವಿನಯ್ ಕುಲಕರ್ಣಿ-ಕಾಶಪ್ಪನವರಿಗೆ ಸಚಿವ ಸ್ಥಾನ ತಪ್ಪಿದ್ದಕ್ಕೆ ಪಂಚಮಸಾಲಿ ಸಮಾಜ ಆಕ್ರೋಶ



ಬಾಗಲಕೋಟೆ: ಪಂಚಮಸಾಲಿ ಮುಖಂಡರಾದ ವಿನಯ್ ಕುಲಕರ್ಣಿ ಹಾಗೂ ವಿಜಯಾನಂದ ಕಾಶಪ್ಪನವರಿಗೆ ಸಚಿವ ಸ್ಥಾನ ತಪ್ಪಿದ್ದಕ್ಕೆ ಪಂಚಮಸಾಲಿ ಫೇಸ್ಬುಕ್ ಪೇಜ್ನಲ್ಲಿ ಕಾಂಗ್ರೆಸ್ ವಿರುದ್ಧ ಆಕ್ರೋಶ ವ್ಯಕ್ತವಾಗುತ್ತಿದೆ.

ಪಂಚಮಸಾಲಿ ಮುಂಚೂಣಿ ನಾಯಕರಾದ ಈ ಇಬ್ಬರನ್ನು ಸೇರಿಸಿಕೊಳ್ಳದಿದ್ರೆ ಸಮೂಹವನ್ನು ಕಡೆಗಣಿಸಿದಂತೆ. ಪಂಚಮಸಾಲಿ ಮೀಸಲಾತಿಗಾಗಿ ದುಡಿದವರಿಗೆ ಅವಕಾಶ ಸಿಗಬೇಕು. ಸಮಾಜದಲ್ಲಿ ಈ ಇಬ್ಬರು ಯುವ ನಾಯಕರು ಬೆಳೆಯುತ್ತಾರೆ ಅಂತ ಕುಂಟು ನೆಪಹೇಳಿ, ಕಾಂಗ್ರೆಸ್ ಪಕ್ಷದ ಪಟ್ಟಭದ್ರ ಹಿತಾಸಕ್ತಿಗಳು ಕುತಂತ್ರದಿಂದ ಇಬ್ಬರಿಗೂ ಸಚಿವ ಸ್ಥಾನ ತಪ್ಪಿಸಿದ್ದಾರೆಂದು ಅನುಮಾನ ಹೊರಹಾಕಿದ್ದಾರೆ.

ಈ ಬಗ್ಗೆ ಕೂಡಲಸಂಗಮ ಪಂಚಮಸಾಲಿ ಪೀಠದ ಜಗದ್ಗುರು ಬಸವ ಜಯಮೃತ್ಯುಂಜಯ ಸ್ವಾಮೀಜಿಗಳು ಸಹ ಬೇಸರ ಹೊರಹಾಕಿದ್ದಾರೆ ಎಂದು ಫೇಸ್ಬುಕ್ ಪೋಸ್ಟ್ನಲ್ಲಿ ಉಲ್ಲೇಖಿಸಲಾಗಿದೆ. ಇವರಿಬ್ಬರಿಗೂ ಸಚಿವ ಸ್ಥಾನ ಕೊಡದೇ ಇದ್ದರೆ, ಈಗ ಕಾಂಗ್ರೆಸ್ ಬೆಂಬಲಿಸಿದ ಪಂಚಮಸಾಲಿ ಸಮಾಜ, ಲೋಕಸಭಾ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸುವ ಎಚ್ಚರಿಕೆಯನ್ನು ನೀಡಿದೆ.

ಸಮಾಜದ ಬಾಂಧವರು ಸಚಿವ ಸ್ಥಾನ ತಪ್ಪಿದ್ದನ್ನು ಖಂಡಿಸಿ ಪ್ರತಿಭಟನೆ ನಡೆಸಲು ಫೇಸ್ಬುಕ್ ಮೂಲಕ ಕರೆ ಕೊಡಲಾಗಿದೆ.

## ಸರ್ಕಾರ ಎದುರಿಸಲು ಬಿಜೆಪಿಯಲ್ಲಿ ಸಮರ್ಥ ವಿರೋಧ ಪಕ್ಷದ ನಾಯಕ ಇಲ್ಲ: ಕಾಂಗ್ರೆಸ್ ವ್ಯಂಗ್ಯ

ಬೆಂಗಳೂರು: ವಿಧಾನಸಭೆ ಚುನಾವಣೆಯಲ್ಲಿ ಗೆಲುವು ಸಾಧಿಸಿ ಸರ್ಕಾರ ರಚಿಸಿದ್ದೇವೆ. ಆದರೆ, ನಮ್ಮ ಸರ್ಕಾರವನ್ನು ಎದುರಿಸಲು ಬಿಜೆಪಿಯಲ್ಲಿ ಸಮರ್ಥ ವಿರೋಧ ಪಕ್ಷದ ನಾಯಕ ಇಲ್ಲದಿರುವುದು ದುರಂತ ಎಂದು ಕಾಂಗ್ರೆಸ್ ಟೀಕಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರದ ಸಂಪುಟ ವಿಸ್ತರಣೆ ಬೆನ್ನಲ್ಲೇ ಬಿಜೆಪಿ ವಿರುದ್ಧ ಚಾಟಿ ಬೀಸಿರುವ ಕಾಂಗ್ರೆಸ್, 'ನಾವು ಗೆದ್ದೂ ಆಯ್ತು, ಆಯ್ಕೆಯೂ ಆಯ್ತು, ಸಚಿವ ಸಂಪುಟವೂ ರೆಡಿ ಆಯ್ತು, ಸರ್ಕಾರದ ರಚನೆಯೂ ಆಯ್ತು. ಇದುವರೆಗೂ ನಮ್ಮ ಸರ್ಕಾರವನ್ನು ಎದುರಿಸಲು ಬಿಜೆಪಿಗೆ ಸಮರ್ಥ ವಿರೋಧ ಪಕ್ಷದ ನಾಯಕ ಸಿಗದಿರುವುದು ದುರಂತ!' ಎಂದು ಛೇಡಿಸಿದೆ.

ಸರ್ಕಾರವನ್ನು ಎದುರಿಸಲು ಬಿಜೆಪಿಗೆ ನೈತಿಕತೆಯೇ ಇಲ್ಲ ಎಂದು ಕುಟುಕಿರುವ ಕಾಂಗ್ರೆಸ್, 'ನೈತಿಕತೆ ಇರದಿದ್ದರೇನಂತೆ, ಕನಿಷ್ಠ ವಿರೋಧ ಪಕ್ಷದ ನಾಯಕನನ್ನು ಮುಂದಿಟ್ಟುಕೊಂಡಾದರು ಬಿಜೆಪಿ ನಮ್ಮನ್ನು ವಿರೋಧಿಸಲಿ!' ಎಂದು ತಿವಿದಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜತೆಗೆ ಕಾಂಗ್ರೆಸ್ ಹೈಕಮಾಂಡ್ ಸತತ ಮೂರು ದಿನಗಳ ಕಾಲ ಸಮಾಲೋಚನೆ ನಡೆಸಿ ಸಂಪುಟ ವಿಸ್ತರಣೆಯ ಕಗ್ಗಂಟನ್ನು ಬಗೆಹರಿಸಿದೆ. 24 ನಾಯಕರು ಶನಿವಾರ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ.

## ಕರ್ನಾಟಕದ ಬಳಿಕ ಮಧ್ಯ ಪ್ರದೇಶದತ್ತ ಕಾಂಗ್ರೆಸ್ ಚಿತ್ತ

### ಮೇ29ರಂದು ಸಭೆ ಕರೆದ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ



ನವದೆಹಲಿ: ಕರ್ನಾಟಕದಲ್ಲಿ ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಭರ್ಜರಿ ಗೆಲುವು ಸಾಧಿಸಿದ್ದು, ಮುಂಬರುವ ವಿಧಾನಸಭೆ ಚುನಾವಣೆಗಳ ಮೇಲೆ ಕಣ್ಣಿಟ್ಟಿದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಮೇ 29ರಂದು ಮಧ್ಯಪ್ರದೇಶದ ಪಕ್ಷದ ಪ್ರಮುಖರ ಸಭೆಯನ್ನು ಕರೆದಿದ್ದು, ವಿಧಾನಸಭಾ ಚುನಾವಣೆಗೆ ಸಿದ್ಧತೆ ಕುರಿತು ಚರ್ಚಿಸಲಿದ್ದಾರೆ.

ಖರ್ಗೆ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಕಮಲ್ ನಾಥ್, ಪಕ್ಷದ ಹಿರಿಯ ನಾಯಕ ದಿಗ್ವಿಜಯ್ ಸಿಂಗ್, ರಾಜ್ಯ ಉಸ್ತುವಾರಿ ಜೆ.ಪಿ. ಅಗರ್ವಾಲ್ ಸೇರಿದಂತೆ ರಾಜ್ಯದ ಹಲವು ಪ್ರಮುಖ ನಾಯಕರು ಭಾಗವಹಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಮಧ್ಯಪ್ರದೇಶದಲ್ಲಿ ಈ ವರ್ಷದ ಡಿಸೆಂಬರ್‌ನಲ್ಲಿ ಚುನಾವಣೆ ನಡೆಯಲಿದೆ.

ಈ ಮೊದಲು ಮೇ 26ರಂದು ಸಭೆ ನಡೆಯಬೇಕಿತ್ತು. ಆದರೆ, ಎರಡು ದಿನಗಳ ಕಾಲ ನಡೆದ ಕರ್ನಾಟಕ ಸಚಿವ ಸಂಪುಟ ವಿಸ್ತರಣೆ ಕುರಿತ ಚರ್ಚೆಯಿಂದಾಗಿ ಸಭೆಯನ್ನು ಮುಂದೂಡಲಾಗಿತ್ತು.

ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಗುರುವಾರ ಮತ್ತು ಶುಕ್ರವಾರದಂದು ಉನ್ನತ ನಾಯಕರ ಜೊತೆ ಸಭೆ ನಡೆಸಿ ರಾಜ್ಯದಲ್ಲಿ ಸಚಿವ ಸಂಪುಟ ವಿಸ್ತರಣೆ ಕುರಿತು ಚರ್ಚೆ ನಡೆಸಿದರು.

ಮೇ 29ರ ಸಭೆಯಲ್ಲಿ, ಪಕ್ಷವು ತನ್ನ ಮುಖ್ಯಮಂತ್ರಿ ಅಭ್ಯರ್ಥಿಯನ್ನು ಘೋಷಿಸುವ ಮತ್ತು ಜನರಿಗೆ ಭರವಸೆಗಳನ್ನು ನೀಡುವ ಸಾಧ್ಯತೆಯಿದೆ.

ಅಲ್ಲದೆ, ರಾಜ್ಯದ ಪ್ರಚಾರ ಕಾರ್ಯತಂತ್ರವನ್ನೂ ಕಾಂಗ್ರೆಸ್ ನಿರ್ಧರಿಸಲಿದೆ. ಕಳೆದ ಕೆಲವು ದಿನಗಳಿಂದ ರಾಜ್ಯದಲ್ಲಿ ಬಿಜೆಪಿಯ ಹಲವು ಪ್ರಮುಖ ನಾಯಕರು ಕಾಂಗ್ರೆಸ್‌ನತ್ತ ಮುಖ ಮಾಡಿದ್ದಾರೆ.

2018ರಲ್ಲಿ ಕಮಲ್ ನಾಥ್ ಮುಖ್ಯಮಂತ್ರಿಯಾಗಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿತ್ತು. ಆದಾಗ್ಯೂ, ಜ್ಯೋತಿರಾದಿತ್ಯ ಸಿಂಧಿಯಾ ಅವರ ಬಂಡಾಯದ ನಂತರ ಸರ್ಕಾರವು ಪತನವಾಯಿತು. ಅವರು ತಮ್ಮ ಹಲವಾರು ಶಾಸಕರೊಂದಿಗೆ ಮಾರ್ಚ್ 2020ರಲ್ಲಿ ಬಿಜೆಪಿಗೆ ಸೇರಿದರು.

ಭ್ರಷ್ಟಾಚಾರ, ಹದಗೆಟ್ಟ ಕಾನೂನು ಮತ್ತು ಸುವ್ಯವಸ್ಥೆ ಮತ್ತು ಆಡಳಿತಾರೂಢ ಬಿಜೆಪಿ ವಿರುದ್ಧ ಭಾರಿ ಆಡಳಿತ ವಿರೋಧಿ ಆರೋಪಗಳನ್ನು ಹೊರಿಸಿ ರಾಜ್ಯದಲ್ಲಿ ಮತ್ತೆ ಅಧಿಕಾರಕ್ಕೆ ಬರುವ ನಿರೀಕ್ಷೆಯಲ್ಲಿ ಕಾಂಗ್ರೆಸ್ ಇದೆ.





## ಇಂದು ಬೆಳಗಾವಿಗೆ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳಕರ್; ಭರ್ಜರಿ ಸ್ವಾಗತಕ್ಕೆ ಬೆಳಗಾವಿ ಸಜ್ಜು

ಬೆಳಗಾವಿ: ರಾಜ್ಯ ಕಾಂಗ್ರೆಸ್ ನೇತೃತ್ವದ ಸರಕಾರದ ನೂತನ ಸಚಿವ ರಾಗಿ ಪ್ರಮಾಣವಚನ ಸ್ವೀಕರಿಸಿರುವ ಸತೀಶ್ ಜಾರಕಿಹೊಳಿ ಮತ್ತು ಲಕ್ಷ್ಮೀ ಹೆಬ್ಬಾಳಕರ್ ಸಚಿವರಾದ ನಂತರ ಮೊದಲ ಬಾರಿಗೆ ಭಾನುವಾರ ಬೆಳಗಾವಿಗೆ ಆಗಮಿಸಲಿದ್ದಾರೆ.

ಒಟ್ಟಾಗಿ ಆಗಮಿಸುತ್ತಿರುವ ಸಚಿವ ದ್ವಯರನ್ನು ಸ್ವಾಗತಿಸಲು ಇಡೀ ಬೆಳಗಾವಿ ಮಹಾನಗರ ಸಜ್ಜಾಗಿದ್ದು, ವಿಮಾನ ನಿಲ್ದಾಣದಿಂದಲೇ ಬೃಹತ್ ರ್ಯಾಲಿ ಮೂಲಕ ನಗರಕ್ಕೆ ಕರೆತರಲು ಕಾರ್ಯಕರ್ತರು, ಅಭಿಮಾನಿಗಳು ನಿರ್ಧರಿಸಿದ್ದಾರೆ.

ಮೇ 20ರಂದು ಸತೀಶ್ ಜಾರಕಿಹೊಳಿ ಹಾಗೂ ಮೇ 27ರಂದು ಲಕ್ಷ್ಮೀ ಹೆಬ್ಬಾಳಕರ್ ಸಂಪುಟ ದರ್ಜೆ ಸಚಿವರಾಗಿ ಅಧಿಕಾರ ಸ್ವೀಕರಿಸಿದ್ದಾರೆ.

ಇಬ್ಬರೂ ಈ ಸರಕಾರದ ಸಚಿವರಾದ ನಂತರ ಮೊದಲಬಾರಿಗೆ ಬೆಳಗಾವಿಗೆ ಆಗಮಿಸುತ್ತಿದ್ದಾರೆ. ಭಾನುವಾರ ಬೆಳಗ್ಗೆ 10.30ಕ್ಕೆ ಇಬ್ಬರೂ ಬೆಳಗಾವಿ ವಿಮಾನ ನಿಲ್ದಾಣಕ್ಕೆ ಬಂದಿಳಿಯಲಿದ್ದಾರೆ.

ಇಬ್ಬರೂ ಸಚಿವರನ್ನು ಅದ್ದೂರಿಯಾಗಿ ವಿಮಾನ ನಿಲ್ದಾಣದಲ್ಲೇ ಸ್ವಾಗತಿಸಿ ಕರೆತರಲು ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಸಾರ್ವಜನಿಕರು ನಿರ್ಧರಿಸಿದ್ದಾರೆ. ವಿಮಾನ ನಿಲ್ದಾಣದಿಂದಲೇ ಬೈಕ್ ರ್ಯಾಲಿ ಮೂಲಕ ಸಚಿವ ದ್ವಯರನ್ನು ನಗರಕ್ಕೆ ಕರೆತರಲಾಗುತ್ತಿದೆ.

ಬೆಳಗಾವಿಗೆ ಆಗಮಿಸಿದ ನಂತರ ಕಿತ್ತೂರು ರಾಣಿ ಚನ್ನಮ್ಮ, ಛತ್ರಪತಿ ಶಿವಾಜಿ ಮಹಾರಾಜ, ಡಾ.ಬಿ.ಆರ್.ಅಂಬೇಡ್ಕರ್, ಸಂಗೊಳ್ಳಿ ರಾಯಣ್ಣ, ಮಹಾತ್ಮಾ ಗಾಂಧೀಜಿ ಸೇರಿದಂತೆ ಮಹಾನ್ ವ್ಯಕ್ತಿಗಳ ಪುತ್ಥಳಿಗಳಿಗೆ ಸಚಿವರು ಮಾಲಾರ್ಪಣೆ ಮಾಡಲಿದ್ದಾರೆ.

## ಐದು ಗ್ಯಾರಂಟಿಗಳು ಮುಂದಿನ ಕ್ಯಾಬಿನೆಟ್ ಬಳಿಕ ಜಾರಿ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ನೂತನ ಸಚಿವರ ಪ್ರಮಾಣವಚನ ಸ್ವೀಕಾರ ಬೆನ್ನಲ್ಲೇ ಮಾಧ್ಯಮಗಳ ಜೊತೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ.. ಸಿಎಂ ಬಿಟ್ಟು 33 ಮಂದಿಯೂ ಕ್ಯಾಬಿನೆಟ್ ಮಿನಿಸ್ಟರ್ಸ್. 33 ಮಂದಿಗೂ ಖಾತೆ ಹಂಚಿಕೆ ಮಾಡಲಾಗಿದೆ. ಮೊದಲ ಬಾರಿ ಗೆದ್ದವರಿಗೆ ಸಚಿವ ಸ್ಥಾನ ನೀಡಿಲ್ಲ. ಎರಡು, ಮೂರು ಬಾರಿ ಗೆದ್ದವರಿಗೆ ಅವಕಾಶ ನೀಡಿದ್ದೇವೆ ಎಂದರು.

ಜನತೆಗೆ ಕೊಟ್ಟಿರುವ ಭರವಸೆ ಈಡೇರಿಸಬೇಕು ಎಂದು ಸರ್ಕಾರ ತೀರ್ಮಾನ ಮಾಡಿದೆ. ಜನರು ಬದಲಾವಣೆ ಬಯಸಿದ್ದಾರೆ. ಅದಕ್ಕೆ ನಾವು ಬದ್ಧರಾಗಿದ್ದು, ಈಡೇರಿಸುತ್ತೇವೆ. ವಿಪಕ್ಷಗಳು ಯಾವತ್ತೂ ಕೂಡ ವಚನ ಈಡೇರಿಸಿಲ್ಲ. ನಾವು ಹಿಂದೆಯೂ ಈಡೇರಿಸಿದ್ದೇವೆ, ಮುಂದೆಯೂ ಈಡೇರಿಸುತ್ತೇವೆ.

ಮುಂದಿನ ಕ್ಯಾಬಿನೇಟ್‌ನಲ್ಲಿ ನಿರ್ಧಾರ ಮಾಡ್ತೀವಿ ಅಂತಾ ಹೇಳಿದರು.

ನಾವು ನೀಡಿರುವ ಐದು ಗ್ಯಾರಂಟಿಗಳನ್ನು ಮುಂದಿನ ಕ್ಯಾಬಿನೆಟ್ ಬಳಿಕ ಜಾರಿ ಆಗಲಿದೆ. ಈಗಾಲೇ ನಾನು ಎಲ್ಲಾ ದಾಖಲೆಗಳನ್ನು ತೆಗೆದುಕೊಂಡು ಬರುವಂತೆ ಹೇಳಿದ್ದೇನೆ. ಮುಂದಿನ ಕ್ಯಾಬಿನೆಟ್ನಲ್ಲಿ ನಿರ್ಧಾರ ಮಾಡ್ತೀವಿ. ಅದನ್ನು ಜಾರಿಗೆ ತರುತ್ತೇವೆ.

## ಮೋದಿ ವಿರುದ್ಧ ಅವಹೇಳನಾಕಾರಿ ಹೇಳಿಕೆ, ಆರ್ಟಿಐ ಕಾರ್ಯಕರ್ತ ಬಂಧನ

ಮುಂಬೈ: ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಮತ್ತು ಬಿಜೆಪಿ ನಾಯಕ ಕಿರಿತ್ ಸೋಮಯ್ಯ ಮತ್ತಿತರರ ವಿರುದ್ಧ "ಅವಹೇಳನಕಾರಿ" ಹೇಳಿಕೆ ನೀಡಿದ ಆರೋಪದ ಮೇರೆಗೆ ಮಾಹಿತಿ ಹಕ್ಕು ಕಾರ್ಯಕರ್ತನನ್ನು ಮುಂಬೈ ಪೊಲೀಸರು ಬಂಧಿಸಿದ್ದಾರೆ. ಆರೋಪಿಯನ್ನು ಗುಲಾಮ್ ಖಾಜಿ ಎಂದು ಗುರುತಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿ ವಿರುದ್ಧ ಐಪಿಸಿ ಸೆಕ್ಷನ್ 509, 500,506 (2) ಮತ್ತು 504 ರ ಅಡಿಯಲ್ಲಿ ಪ್ರಕರಣ ದಾಖಲಿಸಿ ಕಸ್ಟಡಿಗೆ ತೆಗೆದುಕೊಳ್ಳಲಾಗಿದೆ. ಆರೋಪಿ ಫೇಸ್‌ಬುಕ್ ಪೋಸ್ಟ್‌ನಲ್ಲಿ ಪ್ರಧಾನಿ ಮತ್ತಿತರ ನಾಯಕರ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡುವ ಮೂಲಕ ಬೆದರಿಕೆ ಹಾಕಿದ್ದಾನೆ ಎಂದು ಮುಂಬೈನ ಸಕಿನಾಕಾ ಪೊಲೀಸ್ ಠಾಣೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಲಕ್ಷ್ಮೀ ಹೆಬ್ಬಾಳಕರ ಪಾಲಿಗೆ ಡಬಲ್ ಧಮಾಕಾ



ಬೆಳಗಾವಿ: ಮೊದಲ ಬಾರಿಗೆ ಮಂತ್ರಿ ಸ್ಥಾನ ಪಡೆದ ಖುಷಿಯಲ್ಲಿರುವ ಲಕ್ಷ್ಮೀ ಹೆಬ್ಬಾಳಕರ ಅವರ ಪಾಲಿಗೆ ಮತ್ತೊಂದು ಸಂತಸದ ಸುದ್ದಿ ಸಿಕ್ಕಿದೆ. ಮಿನಿಸ್ಟರ್ ಕುರ್ಚಿ ಜತೆಗೇ ಅವರಿಗೆ ಅಜ್ಜಿ ಪದವಿಯೂ ಸಿಕ್ಕಿದೆ.

ಲಕ್ಷ್ಮೀ ಅವರ ಪುತ್ರ ಮೃಣಾಲ್ ಹಾಗೂ ಸೊಸೆ ಡಾ.ಹಿತಾ ಅವರಿಗೆ ಶುಕ್ರವಾರ ತಡರಾತ್ರಿ ಹೆಣ್ಣುಮಗು ಜನಿಸಿದೆ.

ಬೆಂಗಳೂರಿನಲ್ಲಿ ಶನಿವಾರ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸುವ ಕೆಲವೇ ಗಂಟೆಗಳ ಮುಂಚೆ ಅವರಿಗೆ ಅಜ್ಜಿಯಾದ ಹಿರಿಮೆಯೂ ಸಿಕ್ಕಿದೆ. ಇದರಿಂದ ಅವರ ಮನೆಯಲ್ಲಿ ಈಗ ಡಬಲ್ ಸಂಭ್ರಮ ನೆಲೆಸಿದೆ.

# ಡಬಲ್ ಮರ್ಡರ್ ಬೆಚ್ಚಿಬಿದ್ದ ಅವಳಿ ನಗರ



ವಿದ್ಯಾಕಾಶಿ ಧಾರವಾಡ ಬೆಚ್ಚಿ ಬಿದ್ದಿದ್ದೆ. ಬೆಳ್ಳಂಬೆಳಿಗ್ಗೆ ಡಬಲ್ ಮರ್ಡರ್ ನೋಡಿದ ಜನರು ಆತಂಕಕ್ಕೆ ಈಡಾಗಿದ್ದಾರೆ. ರಿಯಲ್ ಎಸ್ಟೇಟ್ ಉದ್ಯಮಿ ಸೇರಿದಂತೆ ಮತ್ತೊರ್ವನ ಭೀಕರ ಹತ್ಯೆ ಪೊಲೀಸ್ ಇಲಾಖೆಯನ್ನು ಕಂಗೆಡಿಸಿದೆ ಅಷ್ಟಕ್ಕೂ ಈ ಹತ್ಯೆಗೆ ಕಾರಣ ಏನೆಂಬುದು ಕಾರಣ ನಿಗೂಢವಾಗಿದೆ. ಧಾರವಾಡದಲ್ಲಿ ರಿಯಲ್ ಎಸ್ಟೇಟ್ ಉದ್ಯಮಿ ಸೇರಿ ಇಬ್ಬರನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ನಿನ್ನೆ ತಡರಾತ್ರಿ ನಡೆದಿದೆ.

ಮಹ್ಮದ್ ಕುಡಚಿ ಎಂಬ ರಿಯಲ್ ಎಸ್ಟೇಟ್ ಉದ್ಯಮಿಯನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಲಾಗಿದೆ. ಧಾರವಾಡದ ಕಮಲಾಪುರದ ಹೊರವಲಯದಲ್ಲಿ ಈ ಘಟನೆ ನಡೆದಿದೆ. ಮಹ್ಮದ್ ಮನೆ ಎದುರು ಕುಳಿತಾಗ ದುಷ್ಕರ್ಮಿಗಳ ಗುಂಪು ಅವರ ಮೇಲೆ ದಾಳಿ ನಡೆಸಿ ಹತ್ಯೆ ಮಾಡಿದೆ. ಕುಡಚಿ ಅವರ ಮನೆಯಿಂದ ಅನತಿ ದೂರದಲ್ಲಿ ಮತ್ತೊಂದು ಶವ ಪತ್ತೆಯಾಗಿದೆ. ಆ ಶವ ಕೂಡ ರಕ್ತಸಿಕ್ತ ಸ್ಥಿತಿಯಲ್ಲಿ ಪತ್ತೆಯಾಗಿದೆ.

ಕುಡಚಿ ಅವರ ಮನೆಯಿಂದಲೇ ಆ ವ್ಯಕ್ತಿ ಕೂಡ ಓಡಿ ಹೋಗಿದ್ದಾನೆ. ರಸ್ತೆಯುದ್ದಕ್ಕೂ ರಕ್ತ ಚೆಲ್ಲಾಡಿದೆ. ದುಷ್ಕರ್ಮಿಗಳು ಆತನನ್ನೂ ಅಟ್ಟಾಡಿಸಿಕೊಂಡು ಹತ್ಯೆ ಮಾಡಿದ್ದಾರೆ. ಈ ಕುರಿತು ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಹುಬ್ಬಳ್ಳಿ–ಧಾರವಾಡ ಪೊಲೀಸ್ ಕಮಿಷನರ ರಮಣ ಗುಪ್ತಾ ಭೇಟಿನೀಡಿ ಘಟನೆ ಕುರಿತು ಮಾಹಿತಿ ಪಡೆದು ಬಳಿಕ ಮಾತನಾಡಿದ ಅವರು ಸೂಕ್ತ ತನಿಖೆ ನಡೆಸಿ ಆದಷ್ಟು ಬೇಗ ಆರೋಪಿಗಳನ್ನ ಪತ್ತೆ ಹಚ್ಚಲಾಗುವುದು ಎಂದರು.

ಶಾಂತಾವಾಗಿದ್ದ ಧಾರವಾಡ ನಗರ ಡಬಲ್ ಮರ್ಡರ್ ನಿಂದ ಬೆಚ್ಚಿಬಿದಿದೆ. ಚುನಾವಣೆಯ ನಂತರ ನಡೆದ ಜೋಡಿ ಕೊಲೆ ಹತ್ಯೆ ಪ್ರಕರಣ ಆರೋಪಿಗಳನ್ನ ಬಂದಿಸುವ ಮೂಲಕ ಅವಳಿ ನಗರದಲ್ಲಿ ಶಾಂತಿಯನ್ನು ಕಾಪಾಡುವ ಕೆಲಸವನ್ನು ಪೊಲೀಸ್ ಇಲಾಖೆ ಮಾಡಬೇಕೆಂಬುದು ಸಾರ್ವಜನಿಕರ ಒತ್ತಾಯವಾಗಿದೆ.

# ಸುಲ್ತಾನಪುರದಲ್ಲಿ ಅದ್ದೂರಿ ಅಂಬೇಡ್ಕರ್ ಜಯಂತಿ: ಸುರೇಶ ತಳವಾರ

ಹುಕ್ಕೇರಿ: ತಾಲೂಕಿನ ಸುಲ್ತಾನಪುರ ಗ್ರಾಮದಲ್ಲಿ ವಿಶ್ವರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ 132ನೇ ಜಯಂತ್ಯೋತ್ಸವವನ್ನು ಅದ್ದೂ–ರಿಯಾಗಿ ಆಚರಿಸಲಾಗುತ್ತಿದ್ದು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಎಸ್ಸಿ–ಎಸ್ಟಿ ದೌರ್ಜನ್ಯ ನಿಯಂತ್ರಣ ಜಿಲ್ಲಾ ಸಮಿಸಿ ಸದಸ್ಯರೂ ಆದ ಆಯೋಜಕ ಸುರೇಶ ತಳವಾರ ಹೇಳಿದರು.



ಪಟ್ಟಣದಲ್ಲಿ ಶನಿವಾರ ಸ್ಂದ್ಧಿಗ್ೋಷ್ಠಿಂಿಂಲ್ಲಿ ಮಾತನಾಡಿದ ಅವರು, ಪ್ರತಿ ವರ್ಷದಂತೆ ಈ ಬಾರಿಯೂ ಸುಲ್ತಾನಪುರದಲ್ಲಿ ಅಂಬೇಡ್ಕರ ಜಯಂತಿ ನಿಮಿತ್ತ ಮೂರು ದಿನಗಳ ಕಾಲ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ನಾಳೆ ಮೇ. 28 ರಂದು ಅದ್ದೂರಿಯಾಗಿ ಅಂಬೇಡ್ಕರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಲಿದೆ ಎಂದರು.

ಜಯಂತಿ ಹಿನ್ನಲೆಯಲ್ಲಿ ಈಗಾಗಲೇ ಲಿಂಬು ಚಮಚ ಸ್ಪರ್ಧೆ, ಕುಂಟಾಟ, ರಂಗೋಲಿ ಸ್ಪರ್ಧೆ, ಭಾಷಣ, ನಿಬಂಧ ಸ್ಪರ್ಧೆ ನಡೆಸಲಾಗಿದೆ. ಸಂಜೆ 6.30 ಕ್ಕೆ ಹಾಡುವ ಮತ್ತು ರಿಕಾರ್ಡ್ ಡ್ಯಾನ್ಸ್ ಸ್ಪರ್ಧೆ ನಡೆಯಲಿವೆ.

ಇಂದು ಮೇ 28 ರಂದು ಬೆಳಗ್ಗೆ 9 ಕ್ಕೆ ಬೈಸಿಕಲ್ ಮತ್ತು ಮೋಟಾರ್ ಸೈಕಲ್ ಸ್ಪರ್ಧೆ, ಬೆಳಗ್ಗೆ 10 ಕ್ಕೆ ಅಂಬೇಡ್ಕರ ಅವರ ಭಾವಚಿತ್ರದ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ.

ಮಧ್ಯಾಹ್ನ 3 ಕ್ಕೆ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಿಗೆ ಬಹುಮಾನ ವಿತರಣೆ, ರಾತ್ರಿ 10 ಕ್ಕೆ ಸಂಗೀತ ರಸಮಂಜರಿ ನಡೆಯಲಿದೆ ಎಂದು ತಳವಾರ ಹೇಳಿದರು.

ಮಕ್ಕಳು ಮತ್ತು ಯುವಕರಲ್ಲಿ ಅಂಬೇಡ್ಕರ, ಸಾವಿತ್ರಿಭಾಯಿ ಫುಲೆ ಸೇರಿದಂತೆ ಮಹಾನ್ ವ್ಯಕ್ತಿಗಳ ಕುರಿತು ಅರಿವು ಮೂಡಿಸುವ ದಿಸೆಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಮೂಲಕ ಅಂಬೇಡ್ಕರ ಆಶಯಗಳು ಮತ್ತು ಕನಸು ಸಾಕಾರಗೊಳಿಸಲು ಯತ್ನಿಸಲಾಗಿದ್ದು ತಾಲೂಕಿನ ದಲಿತ ಸಮಾಜದ ಮುಖಂಡರು ಭಾಗವಹಿಸಲಿದ್ದಾರೆ ಎಂದು ಅವರು ಹೇಳಿದರು.

ಮುಖಂಡರಾದ ಗುರಪ್ಪಾ ತಳವಾರ, ಬಸವರಾಜ ಖಡಕಬಾವಿ, ಯಮನಪ್ಪ ಸನ್ನರಾಮಗೋಳ, ಭೀಮಸೇನ ತಳವಾರ, ನಿಂಗಪ್ಪ ಕಾಂಬಳೆ, ಬಸವರಾಜ ತಳವಾರ, ರಮೇಶ ತಳವಾರ, ಬಾಲಚಂದ್ರ ಕಾಂಬಳೆ, ಗೋಪಾಲ ತಳವಾರ ಹಾಗೂ ಅಂಬೇಡ್ಕರ ಯುವಕ ಮಂಡಳ ಸದಸ್ಯರು ಉಪಸ್ಥಿತರಿದ್ದರು..

# ಕಾಂಗ್ರೆಸ್ ಗ್ಯಾರಂಟಿ ಭಾಗ್ಯ ಪಡೆಯಲು ಬಿಪಿಎಲ್ ಕಾರ್ಡ್‌ಗೆ ಹೆಚ್ಚಿದ ಡಿಮ್ಯಾಂಡ್



ಬೆಳಗಾವಿ: ಚುನಾವಣೆ ಸಂಧರ್ಭದಲ್ಲಿ ರಾಜ್ಯದ ಜನರಿಗೆ ಕಾಂಗ್ರೆಸ್ ಭರ್ಜರಿ ಗ್ಯಾರಂಟಿ ಘೋಷಣೆ ಮಾಡಿತ್ತು. ಇದರಿಂದ ಜನ ನಿರೀಕ್ಷೆಗೂ ಮೀರಿ ಫಲಿತಾಂಶ ನೀಡಿದ್ದರು. ಸಧ್ಯ ಈ ಗ್ಯಾರಂಟಿ ಯೋಜನೆ ಲಾಭ ಪಡೆಯುವ ಹಿನ್ನಲೆಯಲ್ಲಿ ಬಿಪಿಎಲ್‌ಗೆ ಡಿಮ್ಯಾಂಡ್ ಹೆಚ್ಚಾಗುತ್ತಿದ್ದು, ಮೇ 14 ರಿಂದ 20ರವರೆಗೆ 6 ದಿನಗಳಲ್ಲಿ ಬರೋಬ್ಬರಿ 78 ಸಾವಿರ ಅರ್ಜಿಗಳನ್ನು ಸಲ್ಲಿಸಲಾಗಿದೆ.

ಮುಂದಿನ ತಿಂಗಳು ಗ್ಯಾರಂಟಿ ಜಾರಿಯಾಗಲಿರುವ ಲಕ್ಷಣಗಳು ಕಾಣಿಸುತ್ತಿದ್ದಂತೆ ಜನರು ಬಿಪಿಎಲ್ ಕಾರ್ಡ್‌ಗೆ ಅರ್ಜಿ ಸಲ್ಲಿಸುತ್ತಿದ್ದಾರೆ. ಒಟ್ಟು ಆರು ತಿಂಗಳಲ್ಲಿ 2 ಲಕ್ಷದ 88 ಸಾವಿರ ಅರ್ಜಿಗಳು ಸಲ್ಲಿಕೆಯಾಗಿದ್ದು, ಈಗ ಮತ್ತೆ ದಿಢೀರ್ ಏರಿಕೆಯಾಗಿದೆ. ಆದರೆ ಬಿಪಿಎಲ್ ಕಾರ್ಡ್ ಮಿತಿಯನ್ನು ಕರ್ನಾಟಕ ದಾಟಿದೆ. ಕೇಂದ್ರ ಸರ್ಕಾರದ ಸಬ್ಸಿಡಿ ಪಡೆಯಲು ಈ ಮಿತಿ ಬಹಳ ಮುಖ್ಯವಾಗಿದೆ.

ರಾಜ್ಯದಲ್ಲಿ 4.01 ಕೋಟಿ ಜನರಿಗೆ ಮಾತ್ರ ಬಿಪಿಎಲ್ ಸೌಲಭ್ಯ ಕೊಡಬಹುದು. ಆದರೆ ಈಗಾಗಲೇ 30 ಲಕ್ಷ ಹೆಚ್ಚುವರಿ ಬಿಪಿಎಲ್ ಕಾರ್ಡ್‌ಗಳಿವೆ. ಅದ್ದರಿಂದ ಹೊಸದಾಗಿ ಬಂದಿರುವ ಅರ್ಜಿಗಳ ಪರಿಶೀಲನೆ ನಡೆಸಲಾಗುತ್ತದೆ. ಅರ್ಹತೆಗಳ ಆಧಾರದಲ್ಲಿ ಜೂನ್ ಮೊದಲ ವಾರ ಹೊಸ ಅರ್ಜಿಗಳ ವಿಲೇವಾರಿ ಮಾಡಲಾಗುವುದು ಎಂದು ನಾಗರಿಕ ಸರಬರಾಜು ಇಲಾಖೆ ತಿಳಿಸಿದೆ.

# ಬೆಳಗಾವಿ ಜಿ ಆಯ್ ಟಿ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಂದ ಪ್ರಾಜೆಕ್ಟ್ ಎಕ್ಸ್ಪೋ ಪ್ರದರ್ಶನ

ಬೆಳಗಾವಿ: ಸರ್ ಎಂ.ವಿಶ್ವೇಶ್ವರಯ್ಯ ಸಭಾಂಗಣ, ಕೆಎಲ್‌ಎಸ್ ಗೊಗ್ಟೆ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಬೆಳಗಾವಿಯಲ್ಲಿ ಆಯೋಜಿಸಲಾದ "ಪ್ರಾಜೆಕ್ಟ್ ಎಕ್ಸ್ಪೋ – 2023" ಪ್ರದರ್ಶನ ಆಯೋಜನೆ ಮಾಡಲಾಗಿ–ತ್ತು.



ಬೆಳಗಾವಿ ಜಿ ಆಯ್ ಟಿ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಂದ "ಪ್ರಾಜೆಕ್ಟ್ ಎಕ್ಸ್ಪೋ ಪ್ರದರ್ಶನದಲ್ಲಿ ತಂತ್ರಜ್ಞಾನ ವಿಷಯಕ್ಕೆ ಸಂಬಂದಿಸಿದಂತೆ ಸುಮಾರು 250ಕ್ಕೂ ಹೆಚ್ಚುತಯಾರು ಮಾಡಿದ ಪ್ರಾಜೆಕ್ಟ್ ನ್ನು ಪ್ರದರ್ಶನಕ್ಕೆ ಇಡಲಾಗಿತ್ತು.

ಖ್ಯಾತ ವಿಜ್ಞಾನಿ ಡಾ. ವೆಂಕಟೇಶ್ವರಲು ಆಂದ್ರ, ಮಾಜಿ ಉಪ ವಿಭಾಗದ ಮುಖ್ಯಸ್ಥರು, ಕಂಟ್ರೋಲ್ ಡೈನಾಮಿಕ್ಸ್ ಮತ್ತು ಅನಾಲಿಸಿಸ್, ಇಸ್ರೋ ಉಪಗ್ರಹ ಕೇಂದ್ರ, ಬೆಂಗಳೂರು ಇವರು ಉದ್ಘಾಟನಾ ಸಮಾರಂಭಕ್ಕೆ ಗೌರವಾನ್ವಿತ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು.

ಪ್ರಾಜೆಕ್ಟ್ ನಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ಇನ್ ನ್ಯೂಸ್ ಜೋತೆ ಮಾತನಾಡಿ ವಾಹನ ಪಾರ್ಕಿಂಗ್ ಕು–ರಿತು ನಾವು ಸಾಪ್ಟ್ ವೇರ್ ಅಪ್ಲಿಕೇಶನ್ ತಯಾರು ಮಾಡಿದ್ದೇವೆ ಇದರಿಂದ ವಾಹನ ಪಾರ್ಕಿಂಗ್ ಕುರಿತು ಸಾಕಷ್ಟು ಮಾಹಿತಿಗಳನ್ನ ಹಾಗೂ ಇದರ ಉಪಯೋಗ ನಮಗೆ ಆಗಿದೆ.

ಮತ್ತೋಬ್ಬ ವಿದ್ಯಾರ್ಥಿ ಮಾತನಾಡಿ ಮೋಟರ್ ಸೈಕಲ್ ತಾಂತ್ರೀಕಗೊಳಿಸಿ ಸಿ ಸಿ ಟಿವಿ ಬಳಸಿ ವಿಷಯದ ಕುರಿತು ಮತ್ತಷ್ಟು ಮಾಹಿತಿ ನೀಡಿದರು.

ಇಂತಹ ಪ್ರದರ್ಶನ ವಿದ್ಯಾರ್ಥಿಗಳಿಗೆ ಉತ್ತಮ ಅವಕಾಶ ಒದಕಿಸಿಕೊಡುತ್ತದೆ. ಹಾಗಾಗಿ ಇದರಲ್ಲಿ ಸುಮಾರು 300 ಕ್ಕೂ ಹೆಚ್ಚು ಪ್ರೋಜೆಕ್ಟ್ ಅನ್ನು ಪ್ರದರ್ಶನಕ್ಕೆ ಇಡಲಾಗಿದೆ ಎಂದು ಪ್ರಾದ್ಯಾಪಕ ಅರುಣ ಕುಮಾರ ಹೇಳಿದರು.ನಂತರ ಪ್ರೊಪಸರ್ ಡಿ ಎ ಕುಲಕರ್ಣಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರನೀಡಿ ಗೌರವಿಸಿದರು.

ಅಂತಿಮ ವರ್ಷದ ವಿದ್ಯಾರ್ಥಿಗಳು 250+ ಪ್ರಾಜೆಕ್ಟ್ಗಳನ್ನು ಪ್ರದರ್ಶಿಸಿ, ಇದರಲ್ಲಿ ನವೀನ/ಉದ್ಯಮ/ಕೆಎಸ್ಸಿ–ಎಸ್ಟಿ ಅನುದಾನಿತ/ಸಂಶೋಧನಾ ಯೋಜನೆಗಳು ಸೇರಿದ್ದವು 250ಕ್ಕೂ ಹೆಚ್ಚು ಶಾಲಾ ಕಾಲೇಜು ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪೋಷಕರು ಭಾಗವಹಿಸಿದರು.

# ಐಪಿಎಲ್ ಬೆಟ್ಟಿಂಗ್ ದಂಧೆಗೆ ಯುವಕ ಬಲಿ

ಮಂಡ್ಯ: ಐಪಿಎಲ್ ಬೆಟ್ಟಿಂಗ್ ಹಣ ಕೊಡುವ ವಿಚಾರದಲ್ಲಿ ಶುರುವಾದ ಗಲಾಟೆ ಕೊಲೆಯಲ್ಲಿ ಅಂತ್ಯಗೊಂಡಿರೋ ಘಟನೆ ಮದ್ದೂರು ತಾಲೂಕಿನ ಹುಲಿಗೆರೆಪುರ ಗ್ರಾಮದಲ್ಲಿ ನಡೆದಿದೆ. ಪುನೀತ್ (30) ಕೊಲೆಯಾದ ಯುವಕ. ಮೃತ ಯುವಕನು ಚಿಕ್ಕರಸಿನಕೆರೆ ಗ್ರಾಮದ ನಿವಾಸಿ. ಸ್ನೇಹಿತರ ಜೊತೆಗೆ ಐಪಿಎಲ್ ಪಂದ್ಯಾವಳಿ ಬೆಟ್ಟಿಂಗ್ ಕಟ್ಟಿದ್ದ. ಗೆದ್ದ ಹಣವನ್ನು ಕೊಡುವಂತೆ ಕೇಳಿದಾಗ ಇಬ್ಬರ ನಡುವೆ ಜಗಳ ಶುರುವಾಗಿದೆ.

ಈ ವೇಳೆ ಮರದ ತುಂಡಿನಿಂದ ಪುನೀತ್ ತಲೆಗೆ ಹೊಡೆದಿದ್ದಾನೆ. ತೀವ್ರವಾಗಿ ಗಾಯಗೊಂಡ ಪುನೀತ್‌ನನ್ನು ಕೆ.ಎಂ.ದೊಡ್ಡಿ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೆ ಪುನೀತ್ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾನೆ. ಘಟನಾ ಸ್ಥಳಕ್ಕೆ ಮಂಡ್ಯ ಎಸ್ಪಿ ಯತೀಶ್ ಅವರು ತಂಡದ ಜೊತೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಘಟನೆ ಸಂಬಂಧ ಮದ್ದೂರು ಪೊಲೀಸ್ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಾಗಿದೆ.

# ಕರೆಂಟ್ ಬಿಲ್ ಕಟ್ಟದ್ದಕ್ಕೆ ಕನೆಕ್ಷನ್ ಕಟ್: ಜೆಸ್ಕಾಂ ಸಿಬ್ಬಂದಿಯನ್ನು ಹಿಗ್ಗಾಮುಗ್ಗಾ ತರಾಟೆಗೆ ತೆಗುಕೊಂಡಿ ಗ್ರಾಮಸ್ಥರು



ಯಾದಗಿರಿ: ವಿದ್ಯುತ್ ಬಿಲ್ ಕಟ್ಟಿಲ್ಲ ಎಂದು ಕನೆಕ್ಷನ್ ಅನ್ನೇ ಕತ್ತರಿಸಿದ್ದಕ್ಕೆ ರೊಚ್ಚಿಗೆದ್ದ ಗ್ರಾಮಸ್ಥರು ಜೆಸ್ಕಾಂ ಸಿಬ್ಬಂದಿಯನ್ನು ಹಿಗ್ಗಾಮುಗ್ಗಾ ತರಾಟೆಗೆ ತೆಗುಕೊಂಡಿರುವ ಘಟನೆ ಯಾದಗಿರಿಯಲ್ಲಿ ನಡೆದಿದೆ.

ತಾಲೂಕಿನ ಅಬ್ಬೆತುಮಕೂರ ಗ್ರಾಮದಲ್ಲಿ ವಿದ್ಯುತ್ ಕನೆಕ್ಷನ್ ಕಟ್ ಮಾಡಿದ್ದಕ್ಕೆ ಮಹಿಳೆಯರು ಸೇರಿದಂತೆ ಗ್ರಾಮಸ್ಥರು ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಕಾಂಗ್ರೆಸ್‌ನವರು ಕರೆಂಟ್ ಬಿಲ್ ಕಟ್ಟಬೇಡಿ ಎಂದು ಹೇಳಿದ್ದಾರೆ. ಅದಕ್ಕೆ ನಾವ್ಯಾರೂ ಬಿಲ್ ಕಟ್ಟೋದಿಲ್ಲ ಎಂದು ಮಹಿಳೆಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.


ಗ್ರಾಮದಲ್ಲಿ 6–7 ಕುಟುಂಬಸ್ಥರು 5–10 ಸಾವಿರದಷ್ಟು ವಿದ್ಯುತ್ ಬಿಲ್ ಅನ್ನು ಬಾಕಿ ಇಟ್ಟಿದ್ದಾರೆ. ಈ ಕಾರಣಕ್ಕೆ ಜೆಸ್ಕಾಂ ಸಿಬ್ಬಂದಿ ಲೈನ್ ಕಟ್ ಮಾಡಿದ್ದಾರೆ. ವಯರ್ ಅನ್ನು ಕತ್ತರಿಸಿ ತಮ್ಮ ವಾಹನದಲ್ಲಿ ಇರಿಸಿದಾಗ ಮಹಿಳೆಯರು ಸ್ಥಳದಲ್ಲಿ ಗಲಾಟೆ ನಡೆಸಿ ವಾಹನದಲ್ಲಿದ್ದ ವಯರ್‌ಗಳನ್ನು ಕಿತ್ತುಕೊಂಡು ಹೋಗಿದ್ದಾರೆ. ಮಹಿಳೆಯರ ರಂಪಾಟಕ್ಕೆ ಜೆಸ್ಕಾಂ ಸಿಬ್ಬಂದಿ ಸುಸ್ತಾಗಿದ್ದಾರೆ.

# ಶೀಘ್ರವೇ ಜಿಪಂ, ತಾಪಂ ಫೈಟ್: ಮತಕೇಂದ್ರ ತಯಾರಿಗೆ ಚುನಾವಣೆ ಆಯೋಗ ಸಿದ್ದತೆ

ಬೆಂಗಳೂರು: ವಿಧಾನಸಭೆ ಚುನಾವಣೆ ಮುಕ್ತಾಯವಾಗಿ ಹೊಸ ಸರ್ಕಾರ ಅಧಿಕಾರಕ್ಕೆ ಬಂದಿದ್ದು, ಈಗ ಜಿಲ್ಲಾ ಮತ್ತು ತಾಲೂಕು ಪಂಚಾಯಿತಿಗಳಿಗೆ ಚುನಾವಣೆ ಘೋಷಣೆಗೆ ಸಿದ್ಧತೆ ಆರಂಭವಾಗಿದೆ.

ಮತದಾರರ ಪಟ್ಟಿ ಸಿದ್ಧತೆ, ಮತದಾನ ಕೇಂದ್ರಗಳ ಸ್ಥಾಪನೆ ಸಂಬಂಧ ಕಾರ್ಯಪ್ರವೃತ್ತರಾಗವಂತೆ ರಾಜ್ಯ ಚುನಾವಣಾ ಆಯೋಗದಿಂದ ಉಪವಿಭಾಗಾಧಿಕಾರಿಗಳು ಮತ್ತು ತಹಶೀಲ್ದಾರ್ ಗಳಿಗೆ ಸೂಚನೆ ನೀಡಲಾಗಿದೆ.

ಶುಕ್ರವಾರ ಈ ಸಂಬಂಧ ಚುನಾವಣೆ ಆಯೋಗದಿಂದ ಸುತ್ತೋಲೆ ಹೊರಡಿಸಲಾಗಿದ್ದು,



ಮೇ 29 ರಿಂದ ಜಿಲ್ಲಾ ಮತ್ತು ತಾಲೂಕು ಪಂಚಾಯತಿ ಕ್ಷೇತ್ರದ ಮತದಾರರನ್ನು ಗುರುತಿಸುವ ಕಾರ್ಯ ಆರಂಭಿಸಲು ತಿಳಿಸಲಾಗಿದೆ. ಜೂನ್ 4ರವರೆಗೆ ಈ ಕಾರ್ಯ ನಡೆಯಲಿದೆ.

ಜೂನ್ 5 ರಿಂದ 13 ರವರೆಗೆ ಮತದಾರರ ಪಟ್ಟಿ ಪರಿಶೀಲನೆ ಕಾರ್ಯ ನಡೆಯಲಿದ್ದು, ಜೂನ್ 14ರಿಂದ ಕರಡು ಮತದಾರರ ಪಟ್ಟಿ ಪ್ರಕಟ ಸಲಾಗುವುದು. ಜೂನ್ 19ರಂದು ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನವಾಗಿದೆ.

ಜೂನ್ 22 ರಂದು ಆಕ್ಷೇಪಣೆ ಸಲ್ಲಿಸಲು ಅಂತಿಮ ದಿನವಾಗಿದೆ. ಮತ್ತೊಮ್ಮೆ ಪರಿಶೀಲನೆ ಕಾರ್ಯ ಜೂನ್ 25ರಂದು ನಡೆಸಲಾಗುವುದು. ಜೂನ್ 27ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ ಎಂದು ಚುನಾವಣೆ ಆಯೋಗ ತಿಳಿಸಿದೆ.

# ಸಂಪುಟ ದರ್ಜೆ ಸಚಿವರಾಗಿ ಲಕ್ಷ್ಮೀ ಹೆಬ್ಬಾಳ್ಕರ್ ಪ್ರಮಾಣವಚನ ಸ್ವೀಕಾರ



ಬೆಂಗಳೂರು: ರಾಜ್ಯ ಕಾಂಗ್ರೆಸ್ ಸರ್ಕಾರದ ಸಚಿವ ಸಂಪುಟ ವಿಸ್ತರಣೆ ಹಿನ್ನೆಲೆಯಲ್ಲಿ ಇಂದು 24 ನೂತನ ಸಚಿವರ ಪ್ರಮಾಣವಚನ ಕಾರ್ಯಕ್ರಮ ರಾಜಭವನದಲ್ಲಿ ಅದ್ದೂರಿಯಾಗಿ ನಡೆದಿದ್ದು, ಶಾಸಕಿ ಲಕ್ಷ್ಮಿ ಹೆಬ್ಬಾಳ್ಕರ್ ಸಚಿವರಾಗಿ ಮೊದಲ ಬಾರಿ ಪ್ರಮಾಣವಚನ ಸ್ವೀಕರಿಸಿದರು.

ರಾಜಭವನದ ಗಾಜಿನ ಮನೆಯಲ್ಲಿ ನಡೆದ ಪ್ರಮಾಣವಚನ ಸಮಾರಂಭದಲ್ಲಿ ಬೆಳಗಾವಿ ಗ್ರಾಮೀಣ ಕ್ಷೇತ್ರದ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್, ಸಂಪುಟ ದರ್ಜೆ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು.

ಇದೇ ವೇಳೆ ನೂತನ ಸಚಿವರಾಗಿ ಹೆಚ್.ಕೆ.ಪಾಟೀಲ್, ಕೃಷ್ಣಬೈರೇಗೌಡ, ಚಲುವರಾಯಸ್ವಾಮಿ, ಪಿರಿಯಾಪಟ್ಟಣ ವೆಂಕಟೇಶ್, ಡಾ.ಹೆಚ್.ಸಿ.ಮಹದೇವಪ್ಪ, ಈಶ್ವರ ಖಂಡ್ರೆ, ಕೆ.ಎನ್.ರಾಜಣ್ಣ, ದಿನೇಶ್ ಗುಂಡೂರಾವ್, ಶರಣಬಸಪ್ಪ ದರ್ಶನಾಪೂರ, ಶಿವಾನಂದಪಾಟೀಲ್, ಎಸ್ ಎಸ್ ಮಲ್ಲಿಕಾರ್ಜುನ, ಶಿವರಾಜ್ ತಂಗಡಗಿ, ಡಾ.ಶರಣಪ್ರಕಾಶ್ ಪಾಟೀಲ್ ಪ್ರಮಾಣವಚನ ಸ್ವೀಕರಿಸಿದರು. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ನೂತನ ಸಚಿವರಿಗೆ ಪ್ರಮಾಣವಚನ ಬೋಧಿಸಿದರು.

ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್, ಸ್ಪೀಕರ್ ಯು.ಟಿ.ಖಾದರ್, ಕಾಂಗ್ರೆಸ್ ಶಾಸಕರು, ನೂತನ ಸಚಿವರ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.



# ಉದಯನಿಧಿ ಸ್ಟಾಲಿನ್ ಫೌಂಡೇಶನ್‌ನ 36 ಕೋಟಿ ರೂ. ಮೊತ್ತದ ಆಸ್ತಿ, ಬ್ಯಾಂಕ್ ಠೇವಣಿ ಇಡಿಯಿಂದ ಜಪ್ತಿ

ಚೆನ್ನೈ: ಅಕ್ರಮ ಹಣ ವರ್ಗಾವಣೆ ಕುರಿತ ತನಿಖೆಯ ಭಾಗವಾಗಿ ಉದಯನಿಧಿ ಸ್ಟಾಲಿನ್ ಫೌಂಡೇಶನ್ ಅವರ ಬ್ಯಾಂಕ್ ಖಾತೆಯಲ್ಲಿ ಇರಿಸಲಾಗಿದ್ದ 34.7 ಲಕ್ಷ ರೂ ಹಾಗೂ ತಮಿಳುನಾಡಿನಾದ್ಯಂತ 36 ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ಸ್ಥಿರಾಸ್ತಿಯನ್ನು ಜಪ್ತಿ ಮಾಡಲಾಗಿದೆ.

ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯ ವಿವಿಧ ಸೆಕ್ಷನ್ ಅಡಿಯಲ್ಲಿ ಕಲ್ಲಾಲ್ ಗ್ರೂಪ್, ಯುಕೆ ಮೂಲದ ಲೈಕಾ ಗ್ರೂಪ್ ಮತ್ತು ಅದರ ಭಾರತೀಯ ಕಂಪನಿಗಳಾದ ಲೈಕಾ ಪ್ರೊಡಕ್ಷನ್ಸ್ ಮತ್ತು ಲೈಕಾ ಹೋಟೆಲ್‌ಗಳ ವಿರುದ್ಧ ತನಿಖೆ ನಡೆಸಲಾಗುತ್ತಿದೆ ಎಂದು ಜಾರಿ ನಿರ್ದೇಶನಾಲಯ ಹೇಳಿದೆ.

ಏಪ್ರಿಲ್ ಮತ್ತು ಈ ತಿಂಗಳ ಆರಂಭದಲ್ಲಿ ಎರಡು ಸಂಸ್ಥೆಗಳಲ್ಲಿ ಇಡಿ ಶೋಧ ಕಾರ್ಯಾಚರಣೆ ನಡೆಸಿತ್ತು. ಚೆನ್ನೈನ ಸೆಂಟ್ರಲ್ ಕ್ರೈಮ್ ನಿಂದ ದಾಖಲಿಸಲಾದ ಎಫ್ ಐಆರ್ ಆಧಾರದ ಮೇಲೆ ತನಿಖೆ ನಡೆಸಲಾಗುತಿತ್ತು. ಕಲ್ಲಾಲ್ ಗ್ರೂಪ್ ಮತ್ತು ಅದರ ನಿರ್ದೇಶಕರು, ಸಂಸ್ಥಾಪಕರಾದ ಸರವಣನ್ ಪಳನಿಯಪ್ಪನ್, ವಿಜಯಕುಮಾರನ್, ಅರವಿಂತ್ ರಾಜ್ ಮತ್ತು ವಿಜಯ್ ಅನಂತ್ ಅವರು 114.37 ಕೋಟಿ ರೂಪಾಯಿಗಳನ್ನು ವಂಚಿಸಿದ್ದಾರೆ ಎಂದು ದೂರುದಾರ ಪೆಟ್ಟಿಗೋ ಕಮರ್ಷಿಯೋ ಇಂಟರ್ ನ್ಯಾಷನಲ್ ಎಲ್‌ಡಿಎ ನಿರ್ದೇಶಕ ಗೌರವ್ ಚರ್ಚಾ ಆರೋಪಿದ್ದರು ಎಂದು ಇಡಿ ಹೇಳಿಕೆಯಲ್ಲಿ ತಿಳಿಸಿದೆ.

ವಾಸ್ತವವಾಗಿ ಈ ವಂಚನೆಯೂ 300 ಕೋಟಿ ರೂ. ಆಗಿದೆ. ಇದು ಆರೋಪಿಗಳು ಮತ್ತು ದೂರುದಾರರ ವಿರುದ್ಧ ಹುಡುಕಾಟಕ್ಕೆ ಕಾರಣವಾಯಿತು. ಮೇ 25 ರಂದು ಇಡಿ ತಮಿಳುನಾಡಿನಾದ್ಯಂತ 36.3 ಕೋಟಿ ರೂಪಾಯಿ ಮೌಲ್ಯದ ವಿವಿಧ ಸ್ಥಿರಾಸ್ತಿ ಮತ್ತು ಉದಯನಿಧಿ ಸ್ಟಾಲಿನ್ ಫೌಂಡೇಶನ್ ಅವರ ಬ್ಯಾಂಕ್ ಖಾತೆಯಲ್ಲಿ ಲಭ್ಯವಿದ್ದ 34.7 ಲಕ್ಷ ರೂಪಾಯಿ ಜಪ್ತಿ ಮಾಡಲಾಗಿದೆ ಎಂದು ತನಿಖಾ ಏಜೆನ್ಸಿ ಮಾಹಿತಿ ನೀಡಿದೆ.

# ಮನೆ ಮಾಲೀಕರೇ ಹುಷಾರ್–ಬಾಡಿಗೆ ಕೇಳೋ ನೆಪದಲ್ಲಿ ಮಾಡ್ತಾರೆ ಅಟ್ಯಾಕ್

ಬೆಂಗಳೂರು: ಸಿಲಿಕಾನ್ ಸಿಟಿ ಬೆಂಗಳೂರಲ್ಲಿ ನಿಮ್ಮದು ಸ್ವಂತ ಮನೆಯಿದ್ದು ಒಂದಷ್ಟು ಬಾಡಿಗೆ ಮನೆ ಗಳನ್ನು ನೀಡಿದ್ರೆ ಈ ಸ್ಟೋರಿ ನೋಡ್ಬೇಕು. ಲಗ್ಗೆರೆಯ ಪಾರ್ವತಿ ನಗರದಲ್ಲಿ ಶಾಂತಮ್ಮ ಒಂಟಿಯಾಗಿ ವಾಸವಿದ್ದಾರೆ. ಕೊರೊನಾ ಬಂದು ಪತಿ ತೀರಿಕೊಂಡಿದ್ರಿಂದ ಒಬ್ಬರೇ ಇದ್ದರು.

ಇವರದ್ದೊಂದು ಬಾಡಿಗೆ ಮನೆ ಖಾಲಿ ಇತ್ತು. ಯಾರಾದ್ರೂ ಮನೆ ನೋಡೋಕೆ ಬಂದ್ರೆ ತಾನೆ ಮುಂದೆ ನಿಂತು, ಮನೆ ತೋರಿಸ್ತಿದ್ರು. ಅಂತೆಯೇ ಇಂದು (ಶುಕ್ರವಾರ) ಕೂಡ ಬೆಳಗ್ಗೆ 10 ಗಂಟೆ ಸುಮಾರಿಗೆ ಶಾಂತಮ್ಮ ಮನೆ ಬಳಿ ಬಂದ ಅಪರಿಚಿತ ಮಹಿಳೆಯೊಬ್ಬರು, ಮನೆ ಬಾಡಿಗೆ ಬೇಕಿತ್ತು, ಮನೆ ನೋಡಬದಹುದಾ ಅಂತಾ ಕೇಳಿದ್ರು. ಅಷ್ಟೇ ತಾನೇ ಬನ್ನಿ ತೋರಿಸ್ತಿನಿ ಅಂತಾ ಮನೆ ಬಾಗಿ ಓಪನ್ ಮಾಡಿ ಒಳಗೆ ಕರೆದಿದ್ರು. ಮನೆ ಒಳಗೆ ಹೋಗ್ತಿದ್ದಂತೆ ಬಾಗಿಲು ಲಾಕ್ ಮಾಡಿದ ಅಪರಿಚಿತ ಮಹಿಳೆ ಶಾಂತಮ್ಮ ಕತ್ತಿನಲ್ಲಿದ್ದ ಚಿನ್ನದ ಸರ ಬಿಚ್ಚುವಂತೆ ಸೂಚಿಸಿದಳು. ಅಷ್ಟರಲ್ಲಿ ಶಾಂತಮ್ಮ ಜೋರಾಗಿ ಕೂಗಿಕೊಳ್ಳೋಕೆ ಶುರು ಮಾಡಿದರು. ಇದರಿಂದ ಗಾಬರಿಯಾದ ಅಪರಿಚಿತ ಮಹಿಳೆ, ಅಲ್ಲೇ ಇದ್ದ ಕಬ್ಬಿಣ ವಸ್ತುವೊಂದರಿಂದ ಶಾಂತಮ್ಮ



ತಲೆಗೆ ಬಲವಾಗಿ ಹಲ್ಲೆ ಮಾಡಿ, ಕತ್ತಿನಲ್ಲಿದ್ದ ಚಿನ್ನದ ಸರ ಕಸಿದು ಎಸ್ಕೇಪ್ ಆಗಿದ್ದಾಳೆ.

ಹಾಡಹಗಲೇ ಇಂತಹ ಘಟನೆ ನಡೆದಿರೋದು ನೋಡಿದ ಅಕ್ಕಪಕ್ಕದ ಜನರು, ಅಧಿಕಾರಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇದೇ ರಸ್ತೆಯಲ್ಲಿ ಬಿಬಿಎಂಪಿ ವತಿಯಿಂದ ಸಿಸಿಟಿವಿ ಹಾಕಿದ್ದಾರೆ. ಆದರೆ ಅದು ಯಾವಾಗಲೂ ರಿಪೇರಿ. ಇದು ವರ್ಕ್ ಆಗಲ್ಲ. ಯಾರು ಏನೇ ಮಾಡಿ ಹೋದ್ರು ಕೇಳೋರಿಲ್ಲ ಅಂತಿದ್ದಾರೆ.

ಸದ್ಯ ಶಾಂತಮ್ಮ ತಲೆಗೆ ಗಂಭೀರ ಸ್ವರೂಪದ ಗಾಯವಾಗಿದ್ದು, ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಪೊಲೀಸರು ಆರೋಪಿ ಮಹಿಳೆಗಾಗಿ ಹುಡುಕಾಟ ನಡೆಸಿದ್ದಾರೆ.

# ಭಂಡಾರದಲ್ಲಿ ಮಿಂದೆದ್ದ ಮನಸೂರಿನ ಜನತೆ



ಧಾರವಾಡ: ಎತ್ತ ನೋಡಿದರತ್ತ ಭಂಡಾರ ತೂರಾಟ.. ಉಧೋ ಉಧೋ ಎಂದು ಕೂಗುತ್ತಿರುವ ಭಕ್ತ ಸಮೂಹ. ದೇವಿಯ ಮೂರ್ತಿಯನ್ನು ಹೊತ್ತು ಸಾಗುತ್ತಿರುವ ಭಕ್ತರು. ಈ ಎಲ್ಲ ದೃಶ್ಯಗಳಿಗೆ ಸಾಕ್ಷಿಯಾಗಿದ್ದು ಧಾರವಾಡ ತಾಲೂಕಿನ ಮನಸೂರು ಗ್ರಾಮ. ಹೌದು! ಮನಸೂರು ಗ್ರಾಮದಲ್ಲಿ ಕರಿಯಮ್ಮ ದೇವಿ ಜಾತ್ರಾ ಮಹೋತ್ಸವ ನಡೆಯುತ್ತಿದ್ದು, ಇಂದು ಹೊನ್ನಾಟ ಆರಂಭವಾಗಿದೆ.

ಕರಿಯಮ್ಮದೇವಿ ಮೂರ್ತಿಯನ್ನು ಊರ ತುಂಬ ಮೆರವಣಿಗೆ ಮಾಡಲಾಗುತ್ತಿದ್ದು, ಭಕ್ತರು ಪರಸ್ಪರ ಭಂಡಾರವನ್ನು ಎರಚಿ ಸಂಭ್ರಮದ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡಿದ್ದಾರೆ.

ಒಟ್ಟಾರೆ ಮನಸೂರು ಗ್ರಾಮದಲ್ಲಿ ಅದ್ಧೂರಿಯಿಂದ ಕರಿಯಮ್ಮ ದೇವಿ ಜಾತ್ರಾ ಮಹೋತ್ಸವ ನಡೆಯುತ್ತಿದ್ದು, ಭಕ್ತರು ಉತ್ಸಾಹದಿಂದಲೇ ಜಾತ್ರೆಯನ್ನು ಆಚರಿಸುತ್ತಿದ್ದಾರೆ.

# ಕಾರ್–ಬೈಕ್ ಅಪಘಾತ: ಒರ್ವ ವ್ಯಕ್ತಿಗೆ ಗಂಭೀರ ಗಾಯ



ಕೊಟಬಾಗಿ: ಕಾರ್ ಮತ್ತು ಬೈಕ್ ನಡುವೆ ಅಪಘಾತ ಒರ್ವ ವ್ಯಕ್ತಿಗೆ ಗಂಭೀರ ಗಾಯ.ಬೆಳಂಬೆಳಿಗ್ಗೆ ಹುಕ್ಕೇರಿ ತಾಲೂಕಿನ ಕೊಟಬಾಗಿ ಕ್ರಾಸನಲ್ಲಿ, ಘಟಪ್ರಭಾ ಟೂ ಹುಕ್ಕೆರಿ ಗೆ ಹೊಗುವ ಸ್ವಿಪ್ಟ ಕಾರೊಂದು ಹಾಗೆ ಕೊಟಬಾಗಿಯಿಂದ ಹುಕ್ಕೇರಿ ಗೆ ಹೊಗುವ ಬೈಕ್ ಸವಾರನಿಗೆ ಡಿಕ್ಕಿ ಹೊಡೆದ ಪರಿಣಾಮ ವ್ಯಕ್ತಿಗೆ ಗಂಭಿರ ಗಾಯವಾಗಿದ್ದು (Head injury) ಹಾಗೂ ತಲೆಗೆ ಬಲವಾದ ಪೆಟ್ಟು ಬಿದ್ದ ಹಿನ್ನಲೆ ಬೈಕ ಸವಾರ ಕೊಮಾ ಸ್ಥಿತಿಗೆ ಹೊಗಿದ್ದ.

ಇನ್ನೂ ಷರವೇಗವಾಗಿ ಬರುತ್ತಿದ್ದ ಸ್ವಿಪ್ಟ ಕಾರ್ MH09M9231 ಇದ್ದು ಬೈಕ್ ಸವಾರ ಹುಕ್ಕೆರಿ ಮೂಲದವರು ಎಂದು ತಿಳಿದುಬಂದಿದೆ ಬೈಕ್ ನಂಬರ KA49K6924 ಇದ್ದು. ಗಂಭೀರ ಗಾಯಕ್ಕೊಳಗಾದ ವ್ಯಕ್ತಿಯನ್ನು ಸಮೀಪದ ಹುಕ್ಕೇರಿ ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಸ್ಥಳಕ್ಕೆ ಹುಕ್ಕೇರಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಕಲುಷಿತ ನೀರು ಸೇವನೆ; ವಾಂತಿ–ಭೇದಿ ಉಲ್ಬಣ ಆಸ್ಪತ್ರೆಗೆ ದಾಖಲು



ಕೊಪ್ಪಳ : ಯಲಬುರ್ಗಾ ಪಟ್ಟಣ ಹಾಗೂ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಕಲುಷಿತ ನೀರು ಸೇವನೆಯಿಂದ ವಾಂತಿ–ಭೇದಿ ಪ್ರಕರಣ ಬೆಳಕಿಗೆ ಬಂದಿದ್ದು, ಪಟ್ಟಣದ ಸಾರ್ವಜನಿಕ ಸರ್ಕಾರಿ (ನೂರು ಹಾಸಿಗೆ ಆಸ್ಪತ್ರೆಯಲ್ಲಿ ಕಳೆದ ಎರಡು ದಿನಗಳ ಅವಧಿಯಲ್ಲಿ 50ಕ್ಕೂ ಹೆಚ್ಚು ಜನರು ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಪಟ್ಟಣದ ವಿವಿಧ ವಾರ್ಡ್‌ಗಳಲ್ಲಿ ಕಳೆದ ಹಲವಾರು ದಿನಗಳಿಂದ ಕುಡಿಯುವ ನೀರಿನ ಪೈಪ್‌ನಲ್ಲಿ ಕಲುಷಿತ ಮಿಶ್ರಣಗೊಂಡ ಪರಿಣಾಮ ನೂರಾರು ಜನರು ವಾಂತಿ–ಭೇದಿಯಿಂದ ಬಳಲಿ ನಗರದ ಸರ್ಕಾರಿ ಆಸ್ಪತ್ರೆಯಲ್ಲಿ ದಾಖಲಾಗಿದ್ದಾರೆ.

ಮಂಗಳವಾರ ಒಂದೇ ದಿನವೇ ವಾಂತಿ–ಭೇದಿ ಪ್ರಕರಣಕ್ಕೆ 20ಕ್ಕೂ ಜನ ಅಧಿಕ ಜನರು ದಾಖಲಾಗಿ ಚಿಕಿತ್ಸೆ ಹೊಂದಿದ್ದಾರೆ. ಕೆಲವರು ತಮ್ಮ ಮನೆಗಳಿಗೆ ತೆರಳಿದರೆ, ಇನ್ನೂ ಕೆಲವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕೆಲವರ ಸ್ಥಿತಿ ಗಂಭೀರವಾಗಿದ್ದು ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಇನ್ನುಳಿದ ಸಣ್ಣಪುಟ್ಟ ವಾಂತಿ ಭೇದಿ ಪ್ರಕರಣ ಎದುರಿಸುತ್ತಿರುವ ರೋಗಿಗಳಿಗೆ ಪಟ್ಟಣದಲ್ಲಿ ಚಿಕಿತ್ಸೆ ನೀಡಿ ಮನೆಗೆ ಕಳಿಸಲಾಗಿದ್ದು. ಕಳೆದ ಎರಡು ಮೂರು ದಿನಗಳಿಂದ ಇಂತಹ ಪ್ರಕರಣ ಬಹಳ ದಾಖಲಾಗುತ್ತಿದ್ದು ಯಲಬುರ್ಗಾ ಪಟ್ಟಣದ ಹಾಗೂ ತಾಲೂಕಿನ ವಿವಿಧ ಗ್ರಾಮಸ್ಥರು. ನಿತ್ಯ ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗುತ್ತಿದ್ದಾರೆ.

ಯಲಬುರ್ಗಾ ಪಟ್ಟಣ ಪಂಚಾಯತಿಯ ಅಧಿಕಾರಿಗಳ ನಿರ್ಲಕ್ಷ ಹಾಗೂ ಪಟ್ಟಣ ಪಂಚಾಯತಿ ಸದಸ್ಯರ ಸಂಪೂರ್ಣ ನಿರ್ಲಕ್ಷದಿಂದ ಕಲಷಿತ ನೀರು ಸೇವನೆಯಿಂದ ವಾಂತಿ–ಭೇದಿಗೆ ಬಳಲಿ ಚಿಕಿತ್ಸೆಗೆ ದಾಖಲಾಗಿದ್ದಾರೆ. ಇನ್ನು ತಾಲೂಕಿನ ವಿವಿಧ ಗ್ರಾಮಸ್ಥರು ವಾಂತಿ–ಭೇದಿ ಪ್ರಕರಣಕ್ಕೆ ದಾಖಲಾಗಿದ್ದಾರೆ. ಯಲಬುರ್ಗಾ ತಾಲೂಕ ತಹಸಿಲ್ದಾರ್ ವಿಠ್ಠಲ್ ಚೌಗಲಾ ಮಾತನಾಡಿ, ಕಳೆದ ಎರಡು ಮೂರು ದಿನಗಳಿಂದ ವಾಂತಿ ಭೇದಿ ಪ್ರಕರಣಗಳಿಗೆ ಆಸ್ಪತ್ರೆಯಲ್ಲಿ ಸುಮಾರು ಜನರು ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕೆಲವರು ಚಿಕಿತ್ಸೆ ಹೊಂದಿ ಈಗಾಗಲೇ ಗುಣಮುಖವಾಗಿ ತಮ್ಮ ಮನೆಗಳಿಗೆ ಮರಳಿದ್ದಾರೆ. ಇನ್ನು ಕೆಲವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಕುರಿತು ಯಲಬುರ್ಗಾ ಪಟ್ಟಣ ಪಂಚಾಯಿತಿ. ಹಾಗೂ ತಾಲೂಕು ಆರೋಗ್ಯ ಅಧಿಕಾರಿಗಳಿಗೆ ಹಾಗೂ ಗ್ರಾಮದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಕರೆದು ಸಭೆ ನಡೆಸಿ ಪಟ್ಟಣದ ನಿವಾಸಿ ಹಾಗೂ ತಾಲೂಕಿನ ವಿವಿಧ ಗ್ರಾಮಸ್ಥರಿಗೆ ಯಾವುದೇ ರೀತಿ ಕಲುಷಿತ ನೀರು ಸೇವನೆ ಆಗದ ಹಾಗೆ ನೋಡಿಕೊಳ್ಳಿ ಎಂದು ಈಗಾಗಲೇ. ಅಧಿಕಾರಿಗಳಿಗೆ ತಿಳಿಸಲಾಗಿದೆ , ಅವರು ನೀರಿನ ಮಾದರಿ ಪಡೆದು ಪರೀಕ್ಷೆಗೆ ಕಳಹಿಸಿದ್ದಾರೆ ಎಂದು ತಿಳಿಸಿದರು.

## ಹೈದರಾಬಾದ್‌ನಲ್ಲಿ ಕೆಸಿಆರ್ ಭೇಟಿಯಾದ ಕೇಜ್ರಿವಾಲ್

ಹೈದರಾಬಾದ್: ರಾಷ್ಟ್ರ ರಾಜಧಾನಿಯಲ್ಲಿ ಆಡಳಿತಾತ್ಮಕ ಸೇವೆಗಳ ನಿಯಂತ್ರಣ ಕುರಿತ ಕೇಂದ್ರದ ಸುಗ್ರೀವಾಜ್ಞೆ ವಿವಾದ ನಡುವೆ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಶನಿವಾರ ಹೈದರಾಬಾದ್‌ನಲ್ಲಿ ತೆಲಂಗಾಣ ಮುಖ್ಯಮಂತ್ರಿ ಕೆ ಚಂದ್ರಶೇಖರ ರಾವ್ ಅವರನ್ನು ಭೇಟಿಯಾದರು.

ಕೇಂದ್ರದ ಸುಗ್ರೀವಾಜ್ಞೆಯ ವಿರುದ್ಧ ಭಾರತ್ ರಾಷ್ಟ್ರ ಸಮಿತಿಯ ಬೆಂಬಲ ಕೋರಿದರು. ಇದು ಸುಪ್ರೀಂ ಕೋರ್ಟ್ ಆದೇಶದ ಉಲ್ಲಂಘನೆ ಎಂದು ಎಎಪಿ ಹೇಳುತ್ತಿದೆ.

ಈ ಸಂದರ್ಭದಲ್ಲಿ ಕೇಜ್ರಿವಾಲ್ ಅವರೊಂದಿಗೆ ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಮತ್ತು ಎಎಪಿ ಸಂಸದರಾದ ಸಂಜಯ್ ಸಿಂಗ್ ಮತ್ತು



ರಾಘವ್ ಚಡ್ಡಾ ಉಪಸ್ಥಿತರಿದ್ದರು.

ಸುಗ್ರೀವಾಜ್ಞೆಗೆ ವಿರುದ್ಧ ವಿಪಕ್ಷಗಳಿಂದ ಬೆಂಬಲ ಪಡೆಯಲು ದೆಹಲಿ ಮುಖ್ಯಮಂತ್ರಿ ಮೇ 23 ರಿಂದ ರಾಷ್ಟ್ರವ್ಯಾಪಿ ಪ್ರವಾಸ ಕೈಗೊಂಡಿದ್ದಾರೆ.

ಇದಕ್ಕೂ ಮುನ್ನ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, ಮಹಾರಾಷ್ಟ್ರದ ಮಾಜಿ ಸಿಎಂ ಉದ್ಧವ್ ಠಾಕ್ರೆ, ಎನ್ ಸಿಪಿ ಮುಖ್ಯಸ್ಥ ಶರದ್ ಪವಾರ್, ಬಿಹಾರ ಸಿಎಂ ನಿತೀಶ್ ಕುಮಾರ್ ಮತ್ತು ಉಪ ಸಚಿವ ತೇಜಸ್ವಿ ಯಾದವ್ ಅವರನ್ನು ಕೇಜ್ರಿವಾಲ್ ಭೇಟಿ ಮಾಡಿದ್ದರು.

ನವದೆಹಲಿಯಲ್ಲಿ ಇಂದು ನಡೆಯುತ್ತಿರುವ ನೀತಿ ಆಯೋಗ ಸಭೆಗೆ ಹಾಜರಾಗುತ್ತಿಲ್ಲ ಎಂದು ಕೇಜ್ರಿವಾಲ್ ತಿಳಿಸಿದರು.

ರಾಷ್ಟ್ರ ರಾಜಧಾನಿಯಲ್ಲಿ ಅಧಿಕಾರಶಾಹಿಗಳ ವರ್ಗಾವಣೆ ಮತ್ತು ಪೋಸ್ಟಿಂಗ್ ಮಾಡುವ ಅಧಿಕಾರವನ್ನು ಲೆಫ್ಟಿನೆಂಟ್ ಗವರ್ನರ್‌ಗೆ ವಿಸ್ತರಿಸುವ ಸುಗ್ರೀವಾಜ್ಞೆಯನ್ನು ಮೇ 19 ರಂದು ಕೇಂದ್ರ ಸರ್ಕಾರ ಹೊರಡಿಸಿತ್ತು. ಇದಾದ ನಂತರ ಕೇಜ್ರಿವಾಲ್ ವಿಪಕ್ಷಗಳ ಮುಖಂಡರನ್ನು ಭೇಟಿಯಾಗಿ ಬೆಂಬಲ ಕೋರುತ್ತಿದ್ದಾರೆ.

## ಮತಕ್ಷೇತ್ರದ ಅಭಿವೃದ್ದಿಗೆ ಬದ್ದನಾಗಿ ಕೆಲಸ ಮಾಡುವೆ: ರಾಜುಗೌಡ

ತಾಳಿಕೋಟೆ: ಮತಕ್ಷೇತ್ರದ ಪ್ರತಿ ಗ್ರಾಮಗಳಿಗೆ ಅವಶ್ಯವಿರುವ ಕುಡಿಯುವ ನೀರು, ರಸ್ತೆ, ಒಳಗೊಂಡಂತೆ ಮೂಲ ಸೌಕರ್ಯಗಳಿಗೆ ಒತ್ತು ನೀಡುವ ದರೊಂದಿಗೆ ರೈತಪರವಾದಂತಹ ಅಭಿವೃದ್ಧಿ ಕಾರ್ಯ ಕೆಲಸಗಳನ್ನು ಮಾಡಲಿದ್ದನೆಂದು ದೇವರ ಹಿಪ್ಪರಗಿ ಮತಕ್ಷೇತ್ರದ ನೂತನ ಶಾಸಕ ರಾಜುಗೌಡ ಪಾಟೀಲ(ಕು.ಸಾಲವಾಡಗಿ) ಅವರು ಹೇಳಿದರು.

ಶನಿವಾರರಂದು ಮತಕ್ಷೇತ್ರದ ಬೊಮ್ಮನಹಳ್ಳಿ ಗ್ರಾಮಸ್ಥರ ವತಿಯಿಂದ ಗೌರವ ಸನ್ಮಾನ ಸ್ವಿಕರಿಸಿ ಮಾತನಾಡಿದ ಅವರು ದೇವರ ಹಿಪ್ಪರಗಿ ಮತಕ್ಷೇತ್ರದಲ್ಲಿ ಉತ್ತಮ ರಸ್ತೆಗಳ ಕೊರತೆ ಬಹಳಷ್ಟಿದೆ ಅದರ ಜೊತೆಗೆ ಕೇಲವು ಗ್ರಾಮಗಳಲ್ಲಿ



ಕುಡಿಯುವ ನೀರಿನ ತೊಂದರೆ ಸಾಕಷ್ಟು ಇರುವದನ್ನು ಕಂಡಿದ್ದೇನೆ ಮತ್ತು ಶೈಕ್ಷಣಿಕವಾಗಿ ಗ್ರಾಮಗಳು ಅಭಿವೃದ್ದಿ ಹೊಂದಬೇಕಾಗಿದೆ ಮುಖ್ಯವಾಗಿ ನೀರಾವರಿ ಯೋಜನೆಗಳನ್ನು ತರುವದರೊಂದಿಗೆ ಅವುಗಳನ್ನು ಸಂಪೂರ್ಣ ಮುಗಿಸಿ ರೈತರಿಗೆ ಶಕ್ತಿ ತುಂಬುವಂತಹ ಕೆಲಸಗಳನ್ನು ಮಾಡಬೇಕೆಂದು ಉತ್ಸುಕತೆ ಹೊಂದಿದ್ದೇನೆ ಈಗಾಗಲೇ ನಾನು ಕಳೆದ 10 ವರ್ಷಗಳಿಂದ ಕ್ಷೇತ್ರದ ಜನರ ನಾಡಿ ಮಿಡಿತ ಅರಿತುಕೊಂಡಿ ರುವದರಿಂದ ಅವರ ಆಸೆಗೆ ತಕ್ಕಂತೆ ಅವರ ವಿಸ್ವಾಸಕ್ಕೆ ತಕ್ಕಂತೆ ಕೆಲಸಗಳನ್ನು ಮಾಡಲಿದ್ದೇನೆ ನಾನು ಸಾಮಾನ್ಯ ರೈತ ಕುಟುಂಭದಲ್ಲಿ ಹುಟ್ಟಿ ಬೆಳೆದು ಬಂದವನಾಗಿದ್ದು ಯಾರೇ ಜನಸಾಮಾನ್ಯರು ನನ್ನನ್ನು ಮುಕ್ತವಾಗಿ ಬೆಟ್ಟಿ ಯಾಗಿ ತಮ್ಮ ಕೆಲಸ ಕಾರ್ಯಗಳನ್ನು ತೆಗೆದುಕೊಳ್ಳಬಹುದಾಗಿದೆ ಎಂದ ಅವರು ಜನ ಸಾಮಾನ್ಯರ ನಿತ್ಯ ಬೆಟ್ಟಿಗಾಗಿ ನಿಗಧಿತ ಸಮಯವನ್ನು ಮಿಸಲಿಡುವಂತಹ ಕೆಲಸ ಮಾಡಲಿದ್ದೇನೆಂದರು.

ಇದೇ ಸಮಯದಲ್ಲಿ ಬೊಮ್ಮನಹಳ್ಳಿ ಗ್ರಾಮದ ಭಗೀರಥ ಉಪ್ಪಾರ ಸಮಾಜದ ವತಿಯಿಂದ ಶಾಸಕ ರಾಜುಗೌಡ ಪಾಟೀಲ (ಕು.ಸಾಲವಾಡಗಿ) ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಮಯದಲ್ಲಿ ಮುಖಂಡರುಗಳಾದ ಶಿವುಸಾಹುಕಾರ ಕಲ್ಬುರ್ಗಿ, ಜಗದೇವಪ್ಪ ಮಸರಕಲ್ಲ, ಶಿವು ಕಲ್ಬುರ್ಗಿ, ಮಲ್ಲಣ್ಣ ದ್ವಾರನಹಳ್ಳಿ, ರಾಮಚಂದ್ರ ಮಸರಕಲ್ಲ, ಜಗನ್ನಾಥ ಮಸರಕಲ್ಲ, ಸಾಹೇಬಗೌಡ ಪಾಟೀಲ, ಶ್ರೀನಿವಾಸ ಮಸರಕಲ್ಲ, ರಮೇಶ ಮಸರಕಲ್ಲ, ಮಡಿವಾಳಪ್ಪ ಕಲ್ಬುರ್ಗಿ, ಹಾಗೂ ಡಿ.ಬಿ.ಕಲ್ಬುರ್ಗಿ, ಮೊದಲಾದವರು ಇದ್ದರು.

## ತಾಳಿಕೋಟೆ :ವೀರರಾಣಿ ಕಿತ್ತೂರು ಚನ್ನಮ್ಮನ ಮೂರ್ತಿ ಪ್ರತಿಷ್ಟಾಪನೆ



ತಾಳಿಕೋಟಿ: ನಗರದಲ್ಲಿ ಬಹುದಿನಗಳ ಆಸೆಯಾಗಿದ್ದ ಸ್ವಾತಂತ್ರ್ಯದ ಕಿಚ್ಚು,ಕೆಚ್ಚೆದೆಯ ವೀರರಾಣಿ ಕಿತ್ತೂರು ಚನ್ನಮ್ಮನ ಮೂರ್ತಿ ಪ್ರತಿಷ್ಟಾಪನೆ ಕನಸು ಈದೀಗ ರಾಜವಾಡೆಯ ಮೂಲಕ ನನಸಾಗ ತೊಡಗಿದೆ,ಇಂದು ರಾಜವಾಡೆಯಲ್ಲಿ ಹಿರಿಯರ ಸಮ್ಮುಖದಲ್ಲಿ ಭೂಮಿ ಪೂಜೆಯ ನೇರವೇರಿಸಲಾಯಿತು

ನಂತರ ಪುರಸಭೆ ಮಾಜಿ ಅಧ್ಯಕ್ಷರಾದ ಶ್ರೀಮತಿ ನೀಲಮ್ಮ ಪಾಟೀಲ ಮಾತನಾಡಿ ಇದೇ ಜೂನ 23 ರಂದು ನೇರವೇರಲಿರುವ ದ್ಯಾಮವ್ವನ ಜಾತ್ರೆಯ ಒಳಗಡೆ ಮೂರ್ತಿ ಪ್ರತಿಷ್ಟಾಪಿಸಲು ನಿರ್ಧರಿಸಿದ್ದು ಅದರೊಳಗೆ ಸುಂದರವಾದ ಮೂರ್ತಿ ರಾಜವಾಡೆಯ ಮೆರಗನ್ನು ಹೆಚ್ಚಿಸುವದಲ್ಲದೇ ತಾಳಿಕೋಟಿಯಲ್ಲಿ ಇದೊಂದು ಐತಿಹಾಸಿಕ ಮೂರ್ತಿಯಾಗಿ ಎಲ್ಲರ ಕಣ್ಮನ ಸೆಳೆಯುವಂತಾಗಲಿದೆ ಎಂದು ಮಾತನಾಡಿದರು,

ಈ ಸಂದರ್ಭದಲ್ಲಿ ಅಪ್ಪಾಸಾಹೇಬಗೌಡ ಪಾಟೀಲ,ಕಲ್ಲನಗೌಡ ಪಾಟೀಲ,ಮಲ್ಲನಗೌಡ ಕೋರಿ,ಭೀಮನಗೌಡ ಪಾಟೀಲ,ಮಹಾಂತೇಶ ಮುರಾಳ,ಬಸನಗೌಡ ಪಾಟೀಲ,ಸಿದ್ದನಗೌಡ ಬೆಳಗುಂಪಿ,ಗೌಡು ಕಶೆಟ್ಟಿ,ಪ್ರಮೋದ ಕೋರಿ,ಸಂಗಮೇಶ ಬಳಗಾರ ಮಂಜು ಪಾಟೀಲ,ಬಸವರಾಜ ನಗನೂರ,ವಿಶ್ವನಾಥ ಹೆರೂರು,ರಾಜವಾಡೆಯ ಗುರುಹಿರಿಯರು ಉಪಸ್ಥಿತರಿದ್ದರು.

## ವಿದ್ಯುತ ಸಮಸ್ಯೆ ತಪ್ಪಿಸಲು ಮನವಿ



ತಾಳಿಕೋಟೆ: ಪಟ್ಟಣದ ಡಾ, ಎಪಿಜೆ ಅಬ್ದುಲ್ ಕಲಾಂ ಫೌಂಡೇಶನ್ ಹಾಗೂ ಸಾರ್ವಜನಿಕ ಪರವಾಗಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ವಿ ಕ ಹಾಗೂ ಪ ಉಪ ವಿಭಾಗ ಇವರಿಗೆ ವಿದ್ಯುತ್ ಸಂಚಾರವನ್ನು ತೆಗೆಯುವುದರಿಂದ ಚಿಕ್ಕ ಮಕ್ಕಳಿಗೆ ಮತ್ತು ವೃದ್ಧರಿಗೆ ತುಂಬಾ ತೊಂದರೆ ಆಗುತ್ತಿದೆ ಅದಲ್ಲದೆ ಬಡ ಚಿಕ್ಕ ಕಾರ್ಮಿಕ ವರ್ಗದವರಿಗೆ ಅವರ ಅಮೂಲ್ಯವಾದ ವಸ್ತುಗಳನ್ನು ಸುಡುತಿದ್ದಾವೆ ಈ ರೀತಿ ಹಲವಾರು ತೊಂದರೆಗಳನ್ನು ಆಗುತ್ತಿದ್ದು ಸಮಸ್ಯೆಯನ್ನು ಬಗೆ ಹರಿಸಲು ಬಗ್ಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಡಾ, ಎಪಿಜೆ ಅಬ್ದುಲ್ ಕಲಾಂ ಫೌಂಡೇಶನ್ ಅಧ್ಯಕ್ಷರಾದ ಶಫೀಕ್ ಇನಾಮದಾರ , ಹುಸೇನ್ ಪಟೇಲ್, ಸಮಿಉಲ್ಲಾ ಅರಬ್, ಆರಿಫ್ ರೈಚೂರ್, ಯಾಸೀನ್ ಮಕಾಂದಾರ್, ಅಯಾಜ್ ಪಟೇಲ್, ಹುಸೇನ್ ಮಕಾಂದ, ರಿಯಾಜ್ ಇನಾಮ್ದಾರ್, ಗಣಪತಿ ಬಡಿಗೇರ್ ಪೀ ಅ ಖಾಜಿ ಸೇರಿದಂತೆ ಇತರರು ಇದ್ದರು.

## ಕವಿತಾಳ ಕಾಂಗ್ರೆಸ್ ಮುಖಂಡರಿಂದ ಸಂಭ್ರಮಾಚರಣೆ

ಕವಿತಾಳ: ಮಾನ್ವಿ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಯ ಹರಿಕಾರ ಕಾಂಗ್ರೆಸ್ ಪಕ್ಷದ ಧುರೀಣರು, ಮಾಜಿ ಶಾಸಕರು ಮಾಜಿ ವಿಧಾನ ಪರಿಷತ್ ಸದಸ್ಯರು ಹಾಗೂ ಎಐಸಿಸಿ ಕಾರ್ಯದರ್ಶಿಗಳು ಅಭಿವೃದ್ಧಿಯ ಚಿಂತಕರಾದ ಎನ್ ಎಸ್ ಬೋಸರಾಜ್ ಅವರಿಗೆ ಕಾಂಗ್ರೆಸ್ ಸರ್ಕಾರದ ಸಚಿವ ಸಂಪುಟದಲ್ಲಿ ಮಂತ್ರಿ ಸ್ಥಾನ ಸಿಕ್ಕಿದ್ದು ಪಟ್ಟಣದ ಕಾಂಗ್ರೆಸ್ ಯುವ ಮುಖಂಡರು ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಾಚರಣೆ ಮಾಡಿದರು,

ನಂತರ ಮಾತನಾಡಿದ ಅಯ್ಯಪ್ಪ ತೋಳದ್ ಮಾನ್ವಿ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಯ ಹರಿಕಾರರು, ಕಾಂಗ್ರೆಸ್ ಪಕ್ಷದ ಧುರೀಣರು, ಮಾಜಿ ಶಾಸಕರು ಮಾಜಿ ವಿಧಾನ ಪರಿಷತ್ ಸದಸ್ಯರು ಹಾಗೂ ಎಐಸಿಸಿ ಕಾರ್ಯದರ್ಶಿಗಳು ಅಭಿವೃದ್ಧಿಯ ಚಿಂತಕರು ನಮ್ಮ ನೆಚ್ಚಿನ ನಾಯಕರಾದ ಎನ್ ಎಸ್ ಬೋಸರಾಜ ಅವರಿಗೆ ಕಾಂಗ್ರೆಸ್ ಸರ್ಕಾರದ ಸಚಿವ ಸಂಪುಟದಲ್ಲಿ ಮಂತ್ರಿ ಸ್ಥಾನ ಸಿಕ್ಕಿದ್ದು ಮನಸ್ಸಿಗೆ ಮತ್ತು ನಮ್ಮ ರಾಯಚೂರು ಜಿಲ್ಲೆಗೆ ಹೆಚ್ಚಿನ ಅತಿವಾ ಸಂತೋಷದ ಹರ್ಷ ತಂದಿದೆ ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದರು,

ಮಾತನಾಡಿದ ಜಹಾಂಗೀರ್ ಪಾಷ ವಿಶೇಷವಾಗಿ ನಮ್ಮ ರಾಯಚೂರಿನ ಜಿಲ್ಲೆಯವರಿಗೆ ಸಚಿವ ಸ್ಥಾನ ನೀಡಿದ್ದು ಬಹಳ ಅನು ಕೂಲಕರವಾಗಿದೆ ಜಿಲ್ಲೆಯ ಮತ್ತು ಎಲ್ಲಾ ತಾಲೂಕಿನ ಅಭಿವೃದ್ಧಿಗಾಗಿ ಹಗಲಿರಳು ಶ್ರಮಿಸುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನೂತನ ಸಚಿವರಾದ ಎನ್ ಎಸ್ ಬೋಸರಾಜು ಅವರು ನೂತನವಾಗಿ ಪ್ರಮಾಣ ವಚನ ಸ್ವೀಕರಿಸಿದ ನಂತರ ಪಟ್ಟಣದ ಕಾಂಗ್ರೆಸ್ ಹಿರಿಯ



ಮುಖಂಡರು, ಯುವಕರು ಪಟ್ಟಣ ಪಂಚಾಯತ್ ಸದಸ್ಯರು,ಹಾಲಿ ಸದಸ್ಯರು ಪಟಾಕಿ ಸಿಡಿಸಿ ಸಿಹಿ ಹಂಚಿ ಶುಭ ಹಾರೈಸಿ ಅಭಿನಂದನೆಗಳು ತಿಳಿಸಿದರು.

ಈ ಸಂದರ್ಭದಲ್ಲಿ ಓಬಣ್ಣ, ಮೌನೇಶ್ ಹಿರೇಕುರುಬರು,ಕರಿಯಪ್ಪ ಬಾಗಲವಾಡ ಸಣ್ಣ ಕರಿಯಪ್ಪ ಮಡಿವಾಳ, ಅಂಬರೀಶ್ ಮಡಿವಾಳ, ನಾಗರಾಜ್ ಸಾಹುಕಾರ, ಪರಶುರಾಮ್ ಕಬಾಡೆ, ಶರಣಪ್ಪ ಡಾಬಾ, ರಮೇಶ್ ಮಡಿವಾಳ, ವೆಂಕಟೇಶ್ ಮಡಿವಾಳ, ಲಿಂಗರಾಜ ಪೂಜಾರಿ, ಸಿದ್ದು ದಿನ್ನಿ, ಪರೀದ್ ಟೈಲರ್, ಜಾವಿದ್ ಟೈಲರ್, ಜಿಯಾ ಟೈಲರ್, ಮುನ್ನ ದಣಿ, ದುರುಗೇಶ ಗುಡಿ, ಮೌನೇಶ ಉಪ್ಪರ್, ಇನ್ನಿತರರು ಉಪಸ್ಥಿತರಿದ್ದರು.

## ಶಿವಾನಂದ ಪಾಟೀಲರಿಗೆ ಸಚಿವಸ್ಥಾನ : ಸಂಭ್ರಮಿಸಿದ ಅಭಿಮಾನಿಗಳು



ತಾಳಿಕೋಟೆ: ಬ.ಬಾಗೇವಾಡಿ ಶಾಸಕ ಶಿವಾನಂದ ಪಾಟೀಲ ಅವರಿಗೆ ಸಚೀವ ಸ್ಥಾನ ನೀಡಿದ್ದಕ್ಕೆ ಪಟ್ಟಣದಲ್ಲಿ ಶಿವಾನಂದ ಪಾಟೀಲ ಅಭಿಮಾನಿಗಳು ಪಟಾಕ್ಷೀಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ಈ ಸಮಯದಲ್ಲಿ ಮುಖಂಡರುಗಳಾದ ರಘುರಾಮಸಿಂಗ್ ಹಜೇರಿ, ಪ್ರಕಾಶ ಹಜೇರಿ, ತಿಪ್ಪಣ್ಣ ಸಜ್ಜನ, ಬಾಲಾಜಿ ಬಾಯಸ್ಸ್, ಹರಿಸಿಂಗ್ ಕೊಕಟನೂರ, ಶಶಿಧರ ಸರಶೆಟ್ಟಿ, ಅನೀಲ ಹೂಗಾರ, ಲಕ್ಷ್ಮಣ ಬಂಡಿವಡ್ಡರ, ಮೊದಲಾದವರು ಇದ್ದರು.

## ವಿಶ್ವ ಸ್ಕಿಜೋಫ್ರೇನಿಯಾ ದಿನದ ಅಂಗವಾಗಿ ಜಾಥಾ ಕಾರ್ಯಕ್ರಮ

ಧಾರವಾಡ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ಆವರಣದಲ್ಲಿ ವಿಶ್ವ ಸ್ಕಿಜೋಫ್ರೇನಿಯಾ ದಿನದ ಅಂಗವಾಗಿ (ಮೇ.26) ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ವರ್ಷದ ಘೋಷ ವಾಕ್ಯ “ಸಮುದಾಯದ ದಯಾಶೀಲತೆಯ ಶಕ್ತಿಯನ್ನು ಆಚರಿಸುವುದು” ಎಂಬುದಾಗಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ.ಟಿ.ಕೆ ರವರು ಜಾಥಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಒತ್ತಡದಿಂದ ಮನುಷ್ಯನಲ್ಲಿ ನಾನಾ ರೀತಿಯ ಮಾನಸಿಕ ತೊಂದರೆಗಳು ಕಾಣಿಸಿಕೊಳ್ಳುತ್ತಿದ್ದು ಸಮುದಾಯದಲ್ಲಿ ಇದರ ಕುರಿತಾಗಿ ಜಾಗೃತಿ ಮೂಡಿಸಬೇಕಾಗಿದೆ. ಕಾಯಿಲೆಯ ಲಕ್ಷಣಗಳನ್ನು ಶೀಘ್ರದಲ್ಲಿಯೇ ಗುರುತಿಸಿ ವ್ಯಕ್ತಿಯು ಚಿಕಿತ್ಸೆಗೆ ಮುಂದಾಗಬೇಕು ಹಾಗೂ ಚಿಕಿತ್ಸೆ ಅನುಸರಣೆಯಲ್ಲಿ ಕುಟುಂಬದವರ ಪಾತ್ರ ಪ್ರಮುಖವಾದದ್ದು. ಉತ್ತಮ ಜೀವನ ಶೈಲಿಯನ್ನು ರೂಢಿಸಿಕೊಂಡು ಒತ್ತಡ ನಿರ್ವಹಣೆಯ



ಕಲೆಯನ್ನು ಅಳವಡಿಸಿಕೊಂಡು ಅವಶ್ಯವಿದ್ದಾಗ ವೈದ್ಯರಲ್ಲಿ ಚಿಕಿತ್ಸೆ ಪಡೆದುಕೊಳ್ಳಬೇಕು ಹಾಗೂ ಈ ನಿಟ್ಟಿನಲ್ಲಿ ನಾವೆಲ್ಲರೂ ಕೈ ಜೋಡಿಸಿ ಜಾಗೃತಿಯನ್ನು ಉಂಟುಮಾಡುವಲ್ಲಿ ಶ್ರಮಿಸಬೇಕೆಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಪರಶುರಾಮ್. ಎಫ್. ದೊಡಮನಿ ಅವರು ಮಾತನಾಡಿ, ಪ್ರತಿಯೊಬ್ಬರೂ ಈಗ ಒತ್ತಡದಿಂದಲೇ ಜೀವನವನ್ನು ನಡೆಸಬೇಕಾದ ಪರಿಸ್ಥಿತಿ ಇದೆ, ದಿನ ನಿತ್ಯ ಅತೀ ಸಾಮಾನ್ಯವಾದ ಚಟುವಟಿಕೆಗಳು ಕೂಡ ಮನುಷ್ಯನಿಗೆ ಒತ್ತಡವನ್ನು ತರುವಂತಾಗಿದೆ. ಸಿಟ್ಟು , ಉದ್ವೇಗ, ಹಾಗೂ ಮಾನಸಿಕ ತೊಂದರೆಗಳು ಈಗ ಸಣ್ಣ ಪುಟ್ಟ ದೈನಂದಿನ ಕಾರ್ಯಗಳಲ್ಲೂ ಮನುಷ್ಯನನ್ನು ಬಾಧಿಸುತ್ತಿವೆ. ಉತ್ತಮ ಜೀವನ ಶೈಲಿಯನ್ನು ಹಾಗೂ ಸಕಾರಾತ್ಮಕ ಯೋಚನೆಗಳನ್ನು ಅಳವಡಿಸಿಕೊಂಡರೆ ಮನಸ್ಸು ಸದೃಡವಾಗಿರಬಲ್ಲದು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ॥ಪಾಟೀಲ ಶಶಿ ರವರು ವಹಿಸಿಕೊಂಡಿದ್ದರು. ಹಾಗೂ ಮುಖ್ಯ ಅತಿಥಿಗಳಾಗಿ ಧಾರವಾಡ ಮಾನಸಿಕ ಹಾಗೂ ನರ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕ ಡಾ॥ಮಹೇಶ ದೇಸಾಯಿ ಭಾಗವಹಿಸಿದ್ದರು .

ಜಾಥಾ ಕಾರ್ಯಕ್ರಮವು ಧ್ವನಿ ವರ್ಧಕದೊಂದಿಗೆ ಸ್ಕಿಜೋಫ್ರೇನಿಯಾದ ಬಗ್ಗೆ ಮಾಹಿತಿಯನ್ನು ನೀಡುತ್ತಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ಆವರಣದಿಂದ ಹೊರಟು ಎಲ್.ಇ.ಎ ಕ್ಯಾಂಟೀನ್ ಮಾರ್ಗವಾಗಿ ಪುರಸಭೆಯ ಆಸ್ಪತ್ರೆಯಿಂದ ಜುಬಿಲಿ ಸರ್ಕಲ್ ಮಾರ್ಗವಾಗಿ ಮರಳಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ಆವರಣವನ್ನು ತಲುಪಿತು. ಮಾರ್ಗದಲ್ಲಿ ಸಾರ್ವಜನಿಕರಿಗೆ ವಿಶ್ವ ಸ್ಕಿಜೋಫ್ರೇನಿಯಾ ದಿನದ ಕುರಿತಾಗಿ ಮಾಹಿತಿ ಕರಪತ್ರವನ್ನು ಹಂಚಲಾಯಿತು.

ಜಾಥಾ ಕಾರ್ಯಕ್ರಮದಲ್ಲಿ ಮಾನಸಿಕ ಆರೋಗ್ಯ ವಿಭಾಗದ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಹಾಗೂ ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ॥ಕಳಸೂರಮಠ.ಎಸ್.ಬಿ. ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ॥ಶಿವಕುಮಾರ್ ಮಾನಕರ್, ಜಿಲ್ಲಾ ಸಮೀಕ್ಷಣಾ ಅಧಿಕಾರಿ ಡಾ॥ಸುಜಾತಾ ಹಸವಿಮಠ, ರೋಗವಾಹಕ ಆಶ್ರಿತ್ರಾ ರೋಗಗಳ ಜಿಲ್ಲಾ ನಿಯಂತ್ರಣಾಧಿಕಾರಿ ಡಾ॥ ಮಂಜುನಾಥ ಸೊಪ್ಪಿಮಠ, ಜಿಲ್ಲಾ ಕ್ಷಯರೋಗ ನಿಯಂತ್ರಣ ಅಧಿಕಾರಿ ಡಾ॥ ಅಯ್ಯನಗೌಡ ಪಾಟೀಲ, ತಾಲೂಕಾ ಆರೋಗ್ಯಾಧಿಕಾರಿ ಡಾ॥ ತನುಜಾ ಕೆ. ಎನ್. ಜಿಲ್ಲಾ ಆಸ್ಪತ್ರೆ ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳು, ಧಾರವಾಡ ನಗರದ ಆಶಾ ಕಾರ್ಯಕರ್ತೆಯರು, ಡಿ.ಎಚ್.ಓ. ಕಚೇರಿ ಸಿಬ್ಬಂದಿಗಳು, ಡಿಮ್ಹಾನ್ಸ್ ಸಂಸ್ಥೆಯ ಟೆಲಿ–ಮನಸ್ ಸಿಬ್ಬಂದಿಯವರು, ಮನೋವೈದ್ಯರು, ಸಮಾಜ ಕಾರ್ಯಕರ್ತರು ಹಾಗೂ ಮಾನಸಿಕ ಆರೋಗ್ಯ ಕಾರ್ಯಕ್ರಮದ, ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೆ.ಕೆ.ಚವ್ಹಾಣ ಸ್ವಾಗತಿಸಿದರು. ಹಾಗೂ ಬಿ. ಆರ್. ಪಾತ್ರೋಟ ಕಾರ್ಯಕ್ರಮ ನಿರೂಪಿಸಿದರು.

## ಉಚಿತ ವಿದ್ಯುತ್ ನನಗೆ ಬೇಡ: ಬೇರೆಯವರಿಗೆ ಕೊಡಿ: ಡಿಸಿಎಂಗೆ ನಿವೃತ್ತ IAS ಅಧಿಕಾರಿ ಪತ್ರ

ಬೆಂಗಳೂರು: ನಿವೃತ್ತ ಐಎಎಸ್ ಅಧಿಕಾರಿ, ಕರ್ನಾಟಕ ನೀತಿ ಮತ್ತು ಯೋಜನಾ ಆಯೋಗದ ಸದಸ್ಯ ಕೆ ಅಮರನಾರಾಯಣ ಅವರು 200 ಯುನಿಟ್ ಉಚಿತ ವಿದ್ಯುತ್ ಹಂಚಿಕೆ ಸಂಬಂಧ ಡಿಸಿಎಂ ಡಿ ಕೆ ಶಿವಕುಮಾರ್ ಅವರಿಗೆ ಪತ್ರ ಬರೆದಿದ್ದಾರೆ.

ಕರ್ನಾಟಕ ರಾಜ್ಯದ ನೂತನ ಉಪ ಮುಖ್ಯಮಂತ್ರಿಗಳಾಗಿ ಪ್ರಚಂಡ ಬಹುಮತದಿಂದ ಆಯ್ಕೆಗೊಂಡಿರುವ ತಮಗೆ ಹಾರ್ದಿಕ ಅಭಿನಂದನೆಗಳು. ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯಂತೆ, ತಾವುಗಳು ಇಡೀ ರಾಜ್ಯಾದ್ಯಂತ ಪ್ರವಾಸ ಮಾಡುವ ಸಂಧರ್ಭದಲ್ಲಿ ಪ್ರತಿಯೊಬ್ಬರಿಗೂ 200 ಯೂನಿಟ್ ವಿದ್ಯುತ್ತನ್ನು ಉಚಿತವಾಗಿ ಕೊಡುವುದಾಗಿ ಘೋಷಣೆ ಮಾಡಿದ್ದೀರಿ. ಈ ಘೋಷಣೆಯು ಬಡವರ ಪಾಲಿಗೆ ಆಶಾಕಿರಣವಾಗಿದೆ. ಇದೊಂದು ಸ್ತುತ್ಯಾರ್ಹವಾದ ಕಾರ್ಯವಾಗಿದೆ. ಹೊಸ ಸರ್ಕಾರದ ಈ ಯೋಜನೆಯ ಪ್ರಯೋಜನವನ್ನು ನಿಜವಾದ ಅಥ–ರ್ದಲ್ಲಿ ಅದಕ್ಕೆ ಅರ್ಹರಾದವರಿಗೆ ಕೊಡುವುದು ಉಚಿತವೆಂದು ನಾನು ವೈಯುಕ್ತಿಕವಾಗಿ ಅಭಿಪ್ರಾಯಪಡುತ್ತೇನೆ ಎಂದು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯದಲ್ಲಿ ಲಕ್ಷಾಂತರ ಬಡ ಜನರು ಈ ಪ್ರಯೋಜನಕ್ಕೆ ಅರ್ಹರು. ಆದರೆ ನನ್ನಂತಹ ತೆರಿಗೆ ಪಾವತಿ ಮಾಡುವ ಮತ್ತು ಅನುಕೂಲವಾಗಿರುವವರಿಗೆ ಈ ಸೌಲಭ್ಯದ ಅವಶ್ಯಕತೆ ಅಷ್ಟಾಗಿ ಕಂಡುಬರುವುದಿಲ್ಲವೆಂದು ನನ್ನ ಸ್ವಂತ ಅಭಿಪ್ರಾಯವಾಗಿದ. ಈ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರವು ಕೈಗೊಳ್ಳುವ ಕೆಲವು ನಿರ್ಧಾರಗಳು ಬಡವರ, ಅಶಕ್ತರ ಪರವಾಗಿ ಇರಬೇಕೆಂದು ನನ್ನ ಆಶಯ, ಒಬ್ಬ ಆದಾಯ ತೆರಿಗೆ ಪಾವತಿ–ದಾರನಾಗಿ ನನಗೆ ಚೈತನ್ಯವಿದ್ದರೂ ಉಚಿತವಾಗಿ 200 ಯೂನಿಟ್ ವಿದ್ಯುತ್ತನ್ನು ಪಡೆದುಕೊಳ್ಳಲು ನನಗೆ ಮನಸಿಲ್ಲವಾಗಿದೆ. ನಾನೊಬ್ಬ ಪರಿಸರಪ್ರೇಮಿ, ಇದರ ದ್ಯೋತಕವಾಗಿ ನಾನು ವಾಸಿಸುತ್ತಿರುವ ಮನೆಯ ಮೇಲ್ಛಾವಣಿಯಲ್ಲಿ 6.5. ಕವಿಎ ಸೌರ ವಿದ್ಯುತ್ ಸೌಕರ್ಯವನ್ನು ಮಾಡಿಕೊಂಡಿದ್ದೇನೆ, ನಾನು ಬಳಸಿ ಹೆಚ್ಚುವರಿ ವಿದ್ಯುತ್ತನ್ನು ಬೆಸ್ಕಾಂ ಸಂಸ್ಥೆಗೆ ಪೂರೈಸುತ್ತಿದ್ದೇನೆ.

ಅದರಿಂದ ನನಗೆ ಕೊಂಚ ಆದಾಯವೂ ಬರುತ್ತಿದೆ. ಮತ್ತೊಂದು ಕುಟುಂಬಕ್ಕೆ ಸಾಕಾಗುವಷ್ಟು ವಿದ್ಯುತ್ತನ್ನು ಒದಗಿಸುವ ಮೂಲಕ ಪರಿಸರಪ್ರೇಮವನ್ನು ಮರೆದಿದ್ದೇನ. ಆದುದರಿಂದ ನಾನು ಉಚಿತವಾಗಿ 200 ಯೂನಿಟ್ ವಿದ್ಯುತ್ತನ್ನು ಬಳಸಿಕೊಳ್ಳಲು



ಇಚ್ಛಿಸುವುದಿಲ್ಲ.

ದಯಮಾಡಿ ಬೆಸ್ಕಾಂ ನವರು ನನಗೆ ಉಚಿತವಾಗಿ ವಿದ್ಯುತ್ ಸರಬರಾಜು ಮಾಡುವ ಬದಲು, ಸರ್ಕಾರವು ಈ ಸೌಲಭ್ಯವನ್ನು ಒಂದು ಬಡ ಕುಟುಂಬಕ್ಕ ನೀಡಬೇಕೆಂದು ತಮ್ಮಲ್ಲಿ ಕಳಕಳಿಯಿಂದ ಪ್ರಾರ್ಥಿಸುತ್ತೇನೆ.

ಈ ಸಂದರ್ಭದಲ್ಲಿ ನಾನು ಈ ಮೂಲಕ ರಾಜ್ಯದ ಎಲ್ಲಾ ಐ ಎ ಎಸ್, ಐ ಪಿ ಎಸ್, ಐ ಎಫ್ ಎಸ್, ಕೆ ಎ ಎಸ್ ಮತ್ತು ಇತರ ಒಂದನೇ ಶ್ರೇಣಿ ಮತ್ತು ಎರಡನೇ ಶ್ರೇಣಿಯ ಅಧಿಕಾರಿಗಳಲ್ಲಿ ಮನವಿ ಮಾಡಿಕೊಳ್ಳುವುದೇನೆಂದರೆ, ಇಂತಹ ಉಚಿತ ಸೌಲಭ್ಯವನ್ನು ಅರ್ಹ ಫಲಾನುಭವಿಗಳಿಗೆ ಬಿಟ್ಟು ಕೊಡುವ ಮೂಲಕ ತಮ್ಮ ಪ್ರಭುದ್ಧತೆಯನ್ನು ಮರೆಯಬೇಕೆಂದು ವಿನಂತಿಸುತ್ತೇನ.

ನಾವೆಲ್ಲರೂ ಸ್ವಲ್ಪ ತ್ಯಾಗ ಮಾಡುವುದರಿಂದ, ನಿಸ್ವಾರ್ಥ ಸೇವೆ ಮಾಡಿತಂತಾಗಿ ನೈಜ ಮತ್ತು ಅರ್ಹ ಫಲಾನುಭವಿಗಳಿಗೆ ಈ ಸೌಲಭ್ಯ ದೊರೆಯುವಂತಾಗಲಿ ಎಂದು ಆಶಿಸುತ್ತೇನೆ. ಮುಂದುವರೆಯುತ್ತಾ,

ಎಲ್ಲ ಆದಾಯ ತೆರಿಗೆ ಪಾವತಿ ಮಾಡುವ ನಿಷ್ಠಾವಂತ ನಾಗರಿಕರು ಇಂತಹ ಉಚಿತ ಸೌಲಭ್ಯವನ್ನು ಸ್ವಇಚ್ಛೆಯಿಂದ ಪಡೆದುಕೊಳ್ಳಬಾರದೆಂದು ಕಳಕಳಿಯ ಮನವಿ, ಬಹುಷ: ಆದಾಯ ತೆರಿಗೆ ಪಾವತಿದಾರರಿಗೆ 200 ಯೂನಿಟ್ಟೆ ಗೆ ತಗಲುವ ದರವನ್ನು ಪಾವತಿ ಮಾಡುವ ಶಕ್ತಿ ಇರುತ್ತದೆಂದು ನನ್ನ ಭಾವನೆ. ಒಂದು ವೇಳೆ ಸಾಧ್ಯವಿಲ್ಲದಿದ್ದರೆ, ಈ ಸೌಲಭ್ಯವನ್ನು ಪಡೆದುಕೊಳ್ಳುವ ಅವಕಾಶವನ್ನು ಸರ್ಕಾರವು ಒಪ್ಪಿದರೆ ಪಡೆದುಕೊಳ್ಳಬಹುದು.

ಅರ್ಥ ಶಾಸ್ತ್ರದಲ್ಲಿ ಒಂದು ಮಾತಿದೆ: ಅನುಕೂಲಸ್ಥರು ಹೆಚ್ಚಿನ ಹೊರೆಯನ್ನು ಹೊರಬೇಕು ಎಂದು–Broadest shoulders should bear the heaviest burden. ಅಂತಯೇ ನಮಗೆ ಸರ್ಕಾರವು ಸಕಲ ಅವಕಾಶಗಳನ್ನು ಕಲ್ಪಿಸಿರುವ ಸಂಧರ್ಭದಲ್ಲಿ, ಇಂತಹ ಉಚಿತ ಸೇವೆಯನ್ನು ಪಡೆಯದಿರುವುದು ಉತ್ತಮವಾದ ನಾಗರೀಕ ಲಕ್ಷಣ ಎಂದು ವೈಯುಕ್ತಿಕವಾಗಿ ಅಭಿಪ್ರಾಯಪಡುತ್ತೇನೆ.

ಇದೇ ರೀತಿಯಾಗಿ ಸರ್ಕಾರಿ ಸೇವೆಯಲ್ಲಿರುವ ಮತ್ತು ಚೈತನ್ಯವಿರುವ ಇತರ ಸಿ ವರ್ಗದ ನೌಕರರು ಅವರ ಇಚ್ಛಾನುಸಾರ 200 ಯೂನಿಟ್ ವಿದ್ಯುತ್ತನ್ನು ಉಚಿತವಾಗಿ ಬಳಸಿಕೊಳ್ಳುವ ಬಗ್ಗೆ ಅವರ ಸಂಘದ ಮೂಲಕ ಚರ್ಚಿಸಿ ನಿರ್ಧಾರವನ್ನು ಕೈಗೊಳ್ಳಬಹುದಾಗಿದೆ.

ಇದಲ್ಲದೆ ಲಕ್ಷಾಂತರ ಐ ಟಿ ಮತ್ತು ಬಿ ಟಿ ಸಂಸ್ಥೆಗಳಲ್ಲಿ ಕೆಲಸ ಮಾಡುವವರೂ ಸಹ ಇದೇ ಮಾರ್ಗವನ್ನು ಅನುಸರಿಸಿ ಮಾದರಿ ಪ್ರಜೆಗಳಾಗಬೆಂದು ಅವರಲ್ಲಿ ಮನವಿ ಮಾಡಿಕೊಳ್ಳುತ್ತಿದ್ದೇನೆ ಎಂದು ತಿಳಿಸಿದ್ದಾರೆ.

# ನೂತನ ಸಚಿವ ಸತೀಶ್ ಜಾರಕಿಹೊಳಿ ಸ್ವಾಗತಕ್ಕೆ ಬೆಳಗಾವಿ ಸಜ್ಜು

ಬೆಳಗಾವಿ: ಸಿದ್ದರಾಮಯ್ಯ ನೇತೃತ್ವದ ಸಂಪುಟದ ಮೊದಲ ಪಟ್ಟಿಯಲ್ಲೆ ಮಂತ್ರಿ ಸ್ಥಾನ ಗಿಟ್ಟಿಸಿಕೊಂಡಿರುವ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಸಚಿವರಾದ ನಂತರ ಮೊಟ್ಟ ಮೊದಲ ಬಾರಿಗೆ ಭಾನುವಾರ ಬೆಳಗಾವಿಗೆ ಆಗಮಿಸುತ್ತಿರುವ ಹಿನ್ನಲೆಯಲ್ಲಿ ತಮ್ಮ ನೆಚ್ಚಿನ ನಾಯಕನಿಗೆ ಅದ್ದೂರಿಯಾಗಿ ಬರಮಾಡಿಕೊಳ್ಳಲು ಅಭಿಮಾನಿಗಳು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಕುಂದಾನಗರಿಯಲ್ಲಿ ಸಕಲ ಸಿದ್ಧತೆ ಕೈಗೊಂಡಿದ್ದಾರೆ.

ಹೌದು...5ನೇ ಬಾರಿ ಕರ್ನಾಟಕದ ಸಂಪುಟ ದರ್ಜೆ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿರುವ ಸತೀಶ ಜಾರಕಿಹೊಳಿ ಸದ್ಯ ರಾಜ್ಯ ರಾಜಕಾರಣದ ಮೋಸ್ಟ್ ಪವರ್ ಫುಲ್ ಲೀಡರ್ ಆಗಿ ಹೊರ ಹೊಮ್ಮಿದ್ದಾರೆ. ಅಲ್ಲದೇ ಅತ್ತ ಬೆಂಗಳೂರಿನಲ್ಲಿ ಸತೀಶ ಮಂತ್ರಿ ಸ್ಥಾನ ಸ್ವೀಕರಿಸುತ್ತಿದ್ದಂತೆ ಇತ್ತ ಬೆಳಗಾವಿಯಲ್ಲಿ ಅವರ ಅಭಿಮಾನಿಗಳ ಸಂಭ್ರಮಾಚರಣೆ ಮುಗಿಲು ಮುಟ್ಟಿದೆ. ಮೇ 20ರಂದು ಸತೀಶ್ ಜಾರಕಿಹೊಳಿ ಹಾಗೂ ಮೇ 27ರಂದು ಲಕ್ಷ್ಮೀ ಹೆಬ್ಬಾಳಕರ್ ಸಂಪುಟ ದರ್ಜೆ ಸಚಿವರಾಗಿ ಅಧಿಕಾರ ಸ್ವೀಕರಿಸಿದ್ದಾರೆ. ಇಬ್ಬರೂ ಈ ಸರಕಾರದ ಸಚಿವರಾದ ನಂತರ ಮೊದಲಬಾರಿಗೆ ಬೆಳಗಾವಿಗೆ ಆಗಮಿಸುತ್ತಿದ್ದಾರೆ.

ಭಾನುವಾರ ಸಾಯಾಂಕಾಲ 4 ಗಂಟೆಗೆ ಇಬ್ಬರೂ ಬೆಳಗಾವಿ ವಿಮಾನ ನಿಲ್ದಾಣಕ್ಕೆ ಬಂದಿಳಿಯಲಿದ್ದಾರೆ. ಒಟ್ಟಾಗಿ ಆಗಮಿಸುತ್ತಿರುವ ಸಚಿವನ್ನು ಸ್ವಾಗತಿಸಲು ಇಡೀ ಬೆಳಗಾವಿ ಮಹಾನಗರ ಸಜ್ಜಾಗಿದ್ದು, ವಿಮಾನ ನಿಲ್ದಾಣದಿಂದಲೇ ಬೃಹತ್ ರ್ಯಾಲಿ ಮೂಲಕ ನಗರಕ್ಕೆ ಕರೆತರಲು ಕಾರ್ಯಕರ್ತರು, ಅಭಿಮಾನಿಗಳು ನಿರ್ಧರಿಸಿದ್ದಾರೆ.

ನಗರದ ರಾಣಿ ಚನ್ನಮ್ಮ ವೃತ್ತ, ಗೋವಾವ್ವೇಸ್ ನ ವಿಶ್ವಗುರು ಬಸವೇಶ್ವರ ವೃತ್ತ ಬಳಿ ಹಾಗೂ ಕಾಂಗ್ರೆಸ್ ಭವನದ ಮುಂಭಾಗದಲ್ಲಿ ಸತೀಶ ಜಾರಕಿಹೊಳಿ ಅವರ ದೊಡ್ಡ ಗಾತ್ರದ ಕಟೌಟ್ ಗಳು ರಾರಾಜಿಸುತ್ತಿವೆ.

ಅಲ್ಲದೇ ಸಂಕಮ್ ಹೋಟೆಲ್ ರಸ್ತೆ, ಅಶೋಕ ವೃತ್ತ ಸಂಗೊಳ್ಳಿ ರಾಯಣ್ಣ ವೃತ್ತ, ಕೋರ್ಟ್ ರಸ್ತೆ, ಅಂಬೇಡ್ಕರ್ ರಸ್ತೆ ಸೇರಿ ನಗರದ ಪ್ರಮುಖ ರಸ್ತೆಗಳಲ್ಲಿ



ಸತೀಶ ಜಾರಕಿಹೊಳಿ ಅವರಿಗೆ ಶುಭಾಶಯ ಮತ್ತು ಸ್ವಾಗತ ಕೋರುವ ಕಟೌಟ್ ಗಳು ಎಲ್ಲರ ಗಮನ ಸೆಳೆಯುತ್ತಿವೆ.

ಸತೀಶ ಜಾರಕಿಹೊಳಿ ಅವರಿಗೆ ಸಚಿವ ಸ್ಥಾನ ಘೋಷಣೆ ಆಗುವ ಮುಂಚೆಯೇ ಅವರ ಅಭಿಮಾನಿಗಳು ಈ ಕಟೌಟ್ ಹಾಕಿದ್ದು ಮತ್ತೊಂದು ವಿಶೇಷವಾಗಿದೆ.

10 ಸಾವಿರ ಬೈಕ್ ರ್ಯಾಲಿ: ಮೂರು ದಿನಗಳ ಅಧಿವೇಶನ ಬಳಿಕ, ದೆಹಲಿಗೆ ಪ್ರಯಾಣ ಬೆಳೆಸಲಿರುವ ಸತೀಶ ಜಾರಕಿಹೊಳಿ, ಭಾನುವಾರ ಬೆಳಗಾವಿಗೆ ಆಗಮಿಸಲಿದ್ದಾರೆ.

ಈ ವೇಳೆ ಸಾಂಬ್ರಾ ವಿಮಾನ ನಿಲ್ದಾಣದಿಂದ ಅದ್ದೂರಿ ಬೈಕ್ ರ್ಯಾಲಿ ಮೂಲಕ ಅವರನ್ನು ಸ್ವಾಗತಿಸಲು ಅಭಿಮಾನಿಗಳು ಪ್ಲಾನ್ ಮಾಡಿಕೊಂಡಿದ್ದಾರೆ. ಸುಮಾರು 10 ಸಾವಿರ ಬೈಕ್ ಗಳು ಈ ರ್ಯಾಲಿಯಲ್ಲಿ ಭಾಗವಹಿಸಲಿದ್ದು, ತೆರೆದ ವಾಹನದಲ್ಲಿ ಸತೀಶ ಜಾರಕಿಹೊಳಿ ಮೆರವಣಿಗೆ ನಡೆಸಲಿದ್ದಾರೆ. ಕಾಂಗ್ರೆಸ್ ಭವನದಿಂದ ರಾಣಿ ಚನ್ನಮ್ಮ ವೃತ್ತ , ಡಾ. ಬಿ.ಆರ್.ಅಂಬೇಡ್ಕರ್, ಧರ್ಮವೀರ ಸಂಭಾಜಿ ಮಹಾರಾಜ, ವಿಶ್ವಗುರು ಬಸವೇಶ್ವರ, ಸಂಗೊಳ್ಳಿ ರಾಯಣ್ಣ ಸೇರಿ ಮುಂತಾದ ಮಹಾಪುರುಷರ ಪುತ್ಥಳಿಗಳಿಗೆ ನಾಳೆ ನೂತನ ಸಚಿವರಾದ ಸತೀಶ ಜಾರಕಿಹೊಳಿ ಹಾಗೂ ಲಕ್ಷ್ಮೀ ಹೆಬ್ಬಾಳಕರ ಅವರು ಗೌರವ ಸಮರ್ಪಿಸಲಿದ್ದಾರೆ.

ಬೆಳಗಾವಿ ಜಿಲ್ಲೆ 11 ಕಾಂಗ್ರೆಸ್ ಶಾಸಕರು ಭಾಗಿ: ಬೆಳಗಾವಿ ಜಿಲ್ಲೆ 18 ಕ್ಷೇತ್ರಗಳ ಪೈಕಿ 11 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲ್ಲುವಲ್ಲಿ ಸತೀಶ ಜಾರಕಿಹೊಳಿ ಅವರ ಶ್ರಮ ಸಾಕಷ್ಟಿದೆ. ಹೀಗಾಗಿ ಸತೀಶ ಜಾರಕಿಹೊಳಿ ಅವರ ಈ ಅದ್ದೂರಿ ಸ್ವಾಗತ ಮೆರವಣಿಗೆಯಲ್ಲಿ ಕಾಂಗ್ರೆಸ್ ನ 11 ಶಾಸಕರು ಕೂಡ ಭಾಗವಹಿಸಲಿದ್ದಾರೆ.

ಅಲ್ಲದೇ ಸಾವಿರಾರು ಕೈ ಕಾರ್ಯಕರ್ತರು, ಅಭಿಮಾನಿಗಳು ಭಾಗಿಯಾಗುವ ಮೂಲಕ ಭಾನುವಾರ ಬೆಳಗಾವಿಯಲ್ಲಿ ಶಕ್ತಿ ಪ್ರದರ್ಶನ ಮಾಡಲಿದ್ದಾರೆ.

ಒಟ್ಟಾರೆ ಕರ್ನಾಟಕದ ಮಾಸ್ ಲೀಡರ್, ಮಾಸ್ಟರ್ ಮೈಂಡ್ ಎಂದು ಕರೆಸಿಕೊಳ್ಳುವ ಸತೀಶ ಜಾರಕಿಹೊಳಿ ಅವರನ್ನು ಬರಮಾಡಿಕೊಳ್ಳಲು ತುದಿಗಾಲಲ್ಲಿ ನಿಂತಿರುವ ಅಭಿಮಾನಿಗಳು ನಾಳೆ ಬೆಳಗಾವಿಯಲ್ಲಿ ಹಬ್ಬದ ರೀತಿ ಸಂಭ್ರಮ ಮಾಡಲು ನಿರ್ಧರಿಸಿದ್ದಾರೆ.

## ಅಭಿಮಾನಿಗಳಿಂದ ಸಂಭ್ರಮಾಚರಣೆ




ವಿಜಯಪುರ: ಸಚಿವರಾಗಿ ಶಿವಾನಂದ ಪಾಟೀಲ ಪ್ರಮಾಣ ವಚನ ಸ್ವೀಕಾರ ಹಿನ್ನೆಲೆ ವಿಜಯಪುರ ನಗರದ ಚಾಂದನಿ ಹೋಟೆಲ್ ಎದುರು ಶಿವಾನಂದ ಪಾಟೀಲ ಅಭಿಮಾನಿಗಳು ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ಪ್ರತಿಷ್ಠಿತ ಚಾಂದನಿ ಹೋಟೆಲ್ ಮಾಲೀಕ ಮೋಹಿನ್ ಕಲಾದಗಿ ನೇತೃತ್ವದಲ್ಲಿ ಅಭಿಮಾನಿಗಳು ಪಟಾಕಿ ಸಿಡಿಸಿದರು. ಅಲ್ಲದೇ, ಕಾಂಗ್ರೆಸ್ ಸರ್ಕಾರದಲ್ಲಿ , ಸಚಿವರಾಗಿ ಶಿವಾನಂದ ಪಾಟೀಲ ಹೆಸರು ಘೋಷಣೆ ಆಗುತ್ತಿದ್ದಂತೆ ಕೂಗಿ ಸಂತಸ ವ್ಯಕ್ತಪಡಿಸಿದರು. ಅಲ್ಲದೇ, ಇನ್ನು ಹೆಚ್ಚಿನ ಅಭಿವೃದ್ಧಿ ಕೆಲಸಗಳನ್ನು ಮಾಡಲಿ ಎಂದು ಹಾರೈಸಿದರು.

## ನೂತನ ಸಚಿವರಾದ ಸತೀಶ ಜಾರಕಿಹೊಳಿ, ಹೆಬ್ಬಾಳಕರ್ ಇಂದು ಬೆಳಗಾವಿಗೆ: ವಿನಯ ನಾವಲಗಟ್ಟಿ

ಬೆಳಗಾವಿ: " ನೂತನ ಸಚಿವರಾದ ಸತೀಶ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳಕರ್ ಅವರು ಮೊಲದ ಬಾರಿಗೆ ನಾಳೆ ಬೆಳಗಾವಿಗೆ ಆಗಮಿಸಲಿದ್ದು, ಸಚಿವರನ್ನು ಅದ್ದೂರಿಯಾಗಿ ಬರಮಾಡಿಕೊಳ್ಳಲು ಬೈಕ್ ರ್ಯಾಲಿ ಆಯೋಜಿಸಲಾಗಿದೆ" ಎಂದು ಕಾಂಗ್ರೆಸ್ ಗ್ರಾಮೀಣ ಜಿಲ್ಲಾ ಅಧ್ಯಕ್ಷ ವಿನಯ ನಾವಲಗಟ್ಟಿ ತಿಳಿಸಿದರು.

ಭಾನುವಾರ ಸಂಜೆ 4 ಗಂಟೆ–ಗೆ ಬೆಳಗಾವಿ ವಿಮಾನ ನಿಲ್ದಾಣಕ್ಕೆ ಆಗಮಿಸಲಿದ್ದಾರೆ. ತೆರೆದ ವಾಹನದಲ್ಲಿ ಸಚಿವ ಸತೀಶ ಜಾರಕಿಹೊಳಿ ಅವರು ಮೆರವಣಿಗೆ ನಡೆಸಲಿದ್ದಾರೆ. ಕಾಂಗ್ರೆಸ್ ಭವನದಿಂದ ರಾಣಿ ಚನ್ನಮ್ಮ ವೃತ್ತ, ಡಾ. ಬಿ.ಆರ್.ಅಂಬೇಡ್ಕರ್, ಧರ್ಮವೀರ ಸಂಭಾಜಿ ಮಹಾರಾಜ, ವಿಶ್ವಗುರು ಬಸವೇಶ್ವರ, ಸಂಗೊಳ್ಳಿ ರಾಯಣ್ಣ, ಕಾಂಗ್ರೆಸ್ ಬಾವಿ ಮಹಾತ್ಮ ಗಾಂಧಿಜೀ, ಛತ್ರಪತಿ ಶಿವಾಜಿ ಮಹಾರಾಜರ ಸೇರಿ ಮುಂತಾದ ಮಹಾಪುರುಷರ ಪುತ್ಥಳಿಗಳಿಗೆ ನಾಳೆ ನೂತನ ಸಚಿವರಾದ ಸತೀಶ ಜಾರಕಿಹೊಳಿ ಹಾಗೂ ಲಕ್ಷ್ಮೀ ಹೆಬ್ಬಾಳಕರ ಅವರು ಗೌರವ ಸಮರ್ಪಿಸಲಿದ್ದಾರೆ.

ಜಿಲ್ಲೆಯ 11 ಕಾಂಗ್ರೆಸ್ ಶಾಸಕರು ಭಾಗಿ: ಸಚಿವರನ್ನು ಆತ್ಮೀಯವಾಗಿ ಬರಮಾಡಿಕೊಳ್ಳಲು ಜಿಲ್ಲೆಯ 11 ಕಾಂಗ್ರೆಸ್ ಶಾಸಕರು ಭಾಗಿಯಾಗಿಯಾಗಲಿದ್ದಾರೆ. ಅಲ್ಲದೇ ಕೇರಳದ ಶಾಸಕ ವಿಸಿ ವಿಷ್ಣುನಾಥ್, ಸಾವಿರಾರು ಕೈ ಕಾರ್ಯಕರ್ತರು,




ಅಭಿಮಾನಿಗಳು ಭಾಗಿಯಾಗುವ ಮೂಲಕ ಭಾನುವಾರ ಬೆಳಗಾವಿಯಲ್ಲಿ ಶಕ್ತಿ ಪ್ರದರ್ಶನ ಮಾಡಲಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರದೀಪ ಎಂ ಜೆ, ರಾಜಾ ಸಲೀಂ ಕಾಶೀಮ್ಮನವರ, ರಮೇಶ ಮೊಕಾಶಿ, ರವೀಂದ್ರ ಜಿನರಾಳಿ, ಬಸವರಾಜ ಶಿಗಾವಿ, ಈರಣ್ಣ ಬಿಸಿರೊಟ್ಟಿ ಹಾಗೂ ಇತರರು ಇದ್ದರು.

## ನೂತನ ಸಂಪುಟದಲ್ಲಿ ಸಚಿವೆಯಾಗಿ ಹೆಬ್ಬಾಳಕರ ಆಯ್ಕೆ: ಕಾಂಗ್ರೆಸ್ ಕಾರ್ಯಕರ್ತರ ಸಂಭ್ರಮಾಚರಣೆ



ಬೆಳಗಾವಿ: ಗ್ರಾಮೀಣ ಭಾಗದ ಶಾಸಕಿ ಲಕ್ಷ್ಮೀ ಹೆಬ್ಬಾಳಕರ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೂತನ ಸಂಪುಟದಲ್ಲಿ ಸಚಿವರಾಗಿ ಆಯ್ಕೆಯಾಗಿದ್ದ ನಿಮಿತ್ತ ಕಾಂಗ್ರೆಸ್ ಕಾರ್ಯಕರ್ತರು ಬೆಳಗಾವಿಯ ಕಾಂಗ್ರೆಸ್ ಭವನ ಎದುರು ಸಂಭ್ರಮಾಚರಿಸಿದರು. ಮೇ 27ರಂದು ಲಕ್ಷ್ಮೀ ಹೆಬ್ಬಾಳಕರ ಸಂಪುಟ ದರ್ಜೆ ಸಚಿವರಾಗಿ ಅಧಿಕಾರ ಸ್ವೀಕರಿಸುತ್ತಿದ್ದಂತೆ ಕಾಂಗ್ರೆಸ್ ಭವನದ ಎದುರು ಕಾಂಗ್ರೆಸ್ ಕಾರ್ಯಕರ್ತರು ಸಿಹಿ ಹಂಚಿ ಸಂಭ್ರಮಾಚರಿಸಿದರು.

ಈ ವೇಳೆ ಕಾಂಗ್ರೆಸ್ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ ಮಾತನಾಡಿ, ಶಾಸಕಿ ಲಕ್ಷ್ಮೀ ಹೆಬ್ಬಾಳಕರ ಅವರಿಗೆ ಸಚಿವ ಸ್ಥಾನ ಸಿಕ್ಕಿದ್ದು ತುಂಬಾ ಖುಷಿಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ರಾಜಸಲೀಂ ಕಾಶಿಮಣ್ಣವರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರದೀಪ ಎಂ ಜೆ, ಬಸವರಾಜ ಶೇಗಾವಿ, ಶೇಖರ್ ಐಟಿ, ರಮೇಶ ಮೊಕಾಶಿ, ಕಾರ್ಪೊರೇಟರ್ ಅಜೀಂ ಪಟವೇಗಾರ್, ಅನ್ನಪೂರ್ಣ ಅಸುರಕರ್ ಸೇರಿದಂತೆ ಇತರ ಮುಖಂಡರು ಉಪಸ್ಥಿತರಿದ್ದರು.

## ಪಾಟೀಲ್‌ಗೆ ಸಚಿವ ಸ್ಥಾನ ಕಾಂಗ್ರೆಸ್ ಮುಖಂಡರ ವಿಜಯೋತ್ಸವ

ಬ.ಬಾಗೇವಾಡಿ:ಮತಕ್ಷೇತ್ರ ಶಾಸಕ ಶಿವಾನಂದ ಎಸ್ ಪಾಟೀಲ್ ರವರು ಕ್ಯಾಬಿನೆಟ್ ಸಚಿವರಾಗಿ ಆಯ್ಕೆಯಾದ ಹಿನ್ನಲೆಯಲ್ಲಿ ನಗರದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡ ಪರಶುರಾಮ್ ಅಡಗಿಮನಿ ರವರ ನೇತೃತ್ವದಲ್ಲಿ ಮೂಲ ನಂದೀಶ್ವರ ದೇವರಿಗೆ ಪೂಜೆ ಸಲ್ಲಿಸಿ ಸಿಹಿ ಹಂಚಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಸಂಭ್ರಮಿಸಿದರು

ಈ ಸಂದರ್ಭದಲ್ಲಿ ಪರಶುರಾಮ್ ಅಡಗಿಮನಿ ಮಾತನಾಡಿ ಸತತವಾಗಿ ಹ್ಯಾಟ್ರಿಕ್ ಗೆಲುವು ಸಾಧಿಸಿದ ಕೀರ್ತಿ ಶಿವಾನಂದ ಪಾಟೀಲರಿಗೆ ಸಲ್ಲುತ್ತದೆ ಪಕ್ಷದ ಪರವಾಗಿ ಹಾಗೂ ಸಿದ್ದರಾಮಯ್ಯನವರ ಬಲಗೈ ಬಂಟನಾಗಿ ಗುರುತಿಸಿಕೊಂಡಿದ್ದು ಆದಕಾರಣ ಮಾನ್ಯ ಮುಖ್ಯಮಂತ್ರಿಗಳು ನಮ್ಮ ಅವಳಿ ಜಿಲ್ಲೆಗಳಾದ ಬಾಗಲಕೋಟ ಬಿಜಾಪುರ್ ನೀರಾವರಿ ಸಚಿವರಾಗಿ ಆಯ್ಕೆ ಮಾಡಿದ್ದಾದಲ್ಲಿ ಮುಂದಿನ ದಿನಗಳಲ್ಲಿ ವಿಜಯಪುರ ಜಿಲ್ಲೆ ಯನ್ನು ಸಮಗ್ರ ನೀರಾವರಿಯನ್ನು ಮಾಡಿ ನಮ್ಮ ಜಿಲ್ಲೆಯನ್ನು ಬರಗಾಲ ದಿಂದ ಮುಕ್ತ




ಜಿಲ್ಲೆಯನ್ನಾಗಿ ಮಾಡುತ್ತಾರೆ ಎಂದು ಇದೆ ಸಂದರ್ಭದಲ್ಲಿ ಹೇಳಿದರು. ಸಚಿನ್ ಬಾಗೇವಾಡಿ, ಬಸವರಾಜ್ ಬಾಗೇವಾಡಿ ಅಶೋಕ್ ಹಾರಿವಾಳ, ಅಜೀಜ್ ಬಾಗವಾನ ಸೇರಿದಂತೆ ಇತರರು ಇದ್ದರು

## ಪಿಎಸ್‌ಐ ಮನೆಗೆ ಬೆಂಕಿ ಹಚ್ಚಿದ ದುಷ್ಕರ್ಮಿಗಳು ಲಕ್ಷಾಂತರ ಮೌಲ್ಯದ ವಸ್ತುಗಳು ಆಹುತಿ

ಹಾಸನ: ಸಬ್‌ಇನ್ಸ್‌ಪೆಕ್ಟರ್ ಮನೆಗೆ ದುಷ್ಕರ್ಮಿಗಳು ಬೆಂಕಿ ಹಾಕಿರುವ ಘಟನೆ ಹಾಸನ ಜಿಲ್ಲೆ, ಅರಕಲಗೂಡು ತಾಲೂಕಿನ ಕೊಣನೂರಿನಲ್ಲಿ ನಡೆದಿದೆ. ಕೊಣನೂರು ಪೊಲೀಸ್ ಠಾಣೆ ಪಿಎಸ್‌ಐ ಶೋಭಾ ಭರಮಕ್ಕನವರ್ ರಜೆಯ ಮೇಲೆ ಊರಿಗೆ ತೆರಳಿದ್ದರು. ಈ ವೇಳೆ ಅವರ ಬಾಡಿಗೆ ಮನೆಯ ಕಿಟಕಿ ಒಡೆದು ಸೀಮೆಎಣ್ಣೆ ಸುರಿದು ಕಿಡಿಗೇಡಿಗಳು ಬೆಂಕಿ ಹಚ್ಚಿದ್ದಾರೆ.

ಮನೆಯಲ್ಲಿದ್ದ ಲ್ಯಾಪ್‌ಟಾಪ್, ಡ್ರೆಸ್ಸಿಂಗ್ ಟೇಬಲ್, ಬಟ್ಟೆ, ಪೀಠೋಪಕರಣಗಳು ಸೇರಿ ಲಕ್ಷಾಂತರ ಮೌಲ್ಯದ ವಸ್ತುಗಳು ಬೆಂಕಿಗಾಹುತಿಯಾಗಿದೆ. ಶೋಭಾ ರಜೆ ಮುಗಿಸಿ ಶುಕ್ರವಾರ ಮನೆಗೆ ವಾಪಸಾದಾಗ ಕಿಡಿಗೇಡಿಗಳ ಕೃತ್ಯ ಬೆಳಕಿಗೆ ಬಂದಿದೆ.

ಸ್ಥಳಕ್ಕೆ ಶ್ವಾನದಳ ಹಾಗೂ ಬೆರಳಚ್ಚು ತಜ್ಞರು, ಡಿವೈಎಸ್‌ಪಿ ಮುರುಳೀಧರ್ ಹಾಗೂ ವೃತ್ತ ನಿರೀಕ್ಷಕ



ರಘುಪತಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಶೋಭಾ ಭರಮಕ್ಕನವರ್ ಕಳೆದ ಮೂರುವರೆ ತಿಂಗಳ ಹಿಂದಷ್ಟೇ ಜಾವಗಲ್ ಪೊಲೀಸ್ ಠಾಣೆಯಿಂದ ಕೊಣನೂರು ಪೊಲೀಸ್ ಠಾಣೆಗೆ ವರ್ಗಾವಣೆಗೊಂಡಿದ್ದರು.

ಇದೀಗ ಘಟನೆ ಬಗ್ಗೆ ಕೊಣನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ದುಷ್ಕರ್ಮಿಗಳ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.

## ಕಾಂಗ್ರೆಸ್ ಸರ್ಕಾರ ಅಸ್ತಿತ್ವದ ಬೆನ್ನಲ್ಲೇ ನೆಟ್ಟಾರು ಪತ್ನಿಗೆ ಸರ್ಕಾರಿ ನೌಕರಿಯಿಂದ ಕೊಕ್

ಮಂಗಳೂರು: ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬರುತ್ತಲೇ ಬಿಜೆಪಿ ಸರ್ಕಾರದಿಂದ ಮಾನವೀಯ ದೃಷ್ಟಿಯಿಂದ ಸರ್ಕಾರಿ ಕೆಲಸ ಪಡೆದು–ಕೊಂಡಿದ್ದ ಬಿಜೆಪಿ ಮುಖಂಡ ಪ್ರವೀಣ್ ನೆಟ್ಟಾರು ಪತ್ನಿಗೆ ಇದೀಗ ಕೆಲಸದಿಂದ ಕೊಕ್ ನೀಡಲಾಗಿದೆ.


ಕಳೆದ ವರ್ಷ ದುಷ್ಕರ್ಮಿಗಳಿಂದ ಹತ್ಯೆಯಾಗಿದ್ದ ಬಿಜೆಪಿ ಮುಂಖಡ ಪ್ರವೀಣ್ ನೆಟ್ಟಾರು ಅವರ ಪತ್ನಿ ನೂತನ ಕುಮಾರಿ ಅವರಿಗೆ ಹಿಂದಿನ ಬಿಜೆಪಿ ಸರ್ಕಾರ ಮಾನವೀಯ ದೃಷ್ಟಿಯಿಂದ ಸರ್ಕಾರಿ ಕೆಲಸವನ್ನು ನೀಡಿತ್ತು. ಇದೀಗ ಬೊಮ್ಮಾಯಿ ಸರ್ಕಾರದ ತಾತ್ಕಾಲಿಕ ನೆಲೆಯ ನೇಮಕಾತಿಯನ್ನು ಕಾಂಗ್ರೆಸ್ ರದ್ದುಗೊಳಿಸಿದೆ.

ನೂತನ ಕುಮಾರಿ ಅವರನ್ನು 2022ರ ಸೆಪ್ಟೆಂಬರ್ 22 ರಂದು ಗುತ್ತಿಗೆ ಆಧಾರದಲ್ಲಿ ಗ್ರೂಪ್ ಸಿ ಹುದ್ದೆಗೆ




ಬೊಮ್ಮಾಯಿ ಸರ್ಕಾರ ನೇಮಕ ಮಾಡಿತ್ತು. ದಕ್ಷಿಣ ಕನ್ನಡ ಜಿಲ್ಲಾಡಳಿತ ಕಚೇರಿಯ ಪ್ರಾಕೃತಿಕ ವಿಕೋಪ ವಿಭಾಗದಲ್ಲಿ ನೂತನ ಕಾರ್ಯ ನಿರ್ವಹಿಸುತ್ತಿದ್ದರು. ಇದೀಗ ಕಾಂಗ್ರೆಸ್‌ನ ಹೊಸ ಸರ್ಕಾರ ಬಂದ ತಕ್ಷಣ ನೆಟ್ಟಾರು ಪತ್ನಿ ನೂತನ ಅವರನ್ನು ಕೆಲಸದಿಂದ ವಜಾಗೊಳಿಸಲಾಗಿದೆ.

## ವಿವಾಹಿತೆ ಮೇಲೆ ಸಾಮೂಹಿಕ ಅತ್ಯಾಚಾರವೆಸಗಿ ಕೊಲೆ: ನಾಲ್ವರ ಬಂಧನ



ರಾಯಚೂರು: ವಿವಾಹಿತೆ ಮೇಲೆ ನಾಲ್ವರು ದುಷ್ಕರ್ಮಿಗಳು ಸಾಮೂಹಿಕ ಅತ್ಯಾಚಾರ ಎಸಗಿ ಕೊಲೆ ಮಾಡಿದ್ದು, ಆರೋಪಿಗಳಲ್ಲಿ ಒಬ್ಬನನ್ನು ಬಂಧಿಸಲಾಗಿದೆ.

ಸಿಂಧನೂರು ತಾಲೂಕಿನ ಮೂರುಮೈಲ್ ಕ್ಯಾಂಪ್ ನಿವಾಸಿ ಮಾಳಪ್ಪ ಗೌಡಪ್ಪ ಎಂಬುವನನ್ನು ಬಂಧಿಸಲಾಗಿದೆ.

ಮೇ 24 ರಂದು ಸಂಜೆ ನಾಲ್ಕುಮೈಲ್ ಕ್ಯಾಂಪಿನ ಹೊರವಲಯದಲ್ಲಿ 46 ವರ್ಷದ ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ. ವಿರೋಧ ವ್ಯಕ್ತಪಡಿಸಿದ ಮಹಿಳೆ ಮೇಲೆ ತೀವ್ರವಾಗಿ ಹಲ್ಲೆ ನಡೆಸಿ ಸ್ಥಳದಲ್ಲೇ ಬಿಟ್ಟು ಪರಾರಿಯಾಗಿದ್ದಾರೆ.

ಮನಸೋ ಇಚ್ಛೆ ಹಲ್ಲೆ ನಡೆಸಿದ್ದರಿಂದ ಮಹಿಳೆ ತೀವ್ರ ಅಸ್ವಸ್ಥರಾಗಿದ್ದಾರೆ.

ಆಕೆಯನ್ನು ಗಮನಿಸಿದ ಜನ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗಿದೆ.

ಹೆಚ್ಚಿನ ಚಿಕಿತ್ಸೆಗಾಗಿ ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮಹಿಳೆ ಮೃತಪಟ್ಟಿದ್ದಾರೆ.

ಸಿಂಧನೂರು ಗ್ರಾಮೀಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಘಟನೆಗೆ ಸಂಬಂಧಿಸಿದಂತೆ ಆರೋಪಿ ಮಾಳಪ್ಪನನ್ನು ಬಂಧಿಸಲಾಗಿದೆ.

## ಲಕ್ಷ್ಮಣ ಸವದಿಗೆ ಸಚಿವ ಸ್ಥಾನ ಕೈತಪ್ಪಿದ್ದಕ್ಕೆ ಬೆಂಬಲಿಗರ ಆಕ್ರೋಶ



ಬೆಳಗಾವಿ: ಶಾಸಕ ಲಕ್ಷ್ಮಣ ಸವದಿ ಅವರಿಗೆ ಸಚಿವ ಸ್ಥಾನ ಕೈತಪ್ಪಿದ್ದಕ್ಕೆ ಬೆಂಬಲಿಗರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ಲಕ್ಷ್ಮಣ ಸವದಿ ಅಭಿಮಾನಿಗಳು ಆಕ್ರೋಶ ಹೊರಹಾಕಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಹಾಕಿ ಆಕ್ರೋಶ ಹೊರ ಹಾಕಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ ಕಾಂಗ್ರೆಸ್‌ಗೆ ಹೆಚ್ಚು ಸ್ಥಾನ ಬರಲು ಲಕ್ಷ್ಮಣ ಸವದಿ ಕಾರಣ. ಲಕ್ಷ್ಮಣ ಸವದಿ ಮಂತ್ರಿ ಆಗದಂತೆ ಕೆಲವರು ಕುತಂತ್ರ ನಡೆಸಿದ್ದಾರೆಂದು ಆರೋಪಿಸಿದ್ದಾರೆ.

## ಸೈಕಲ್‌ಗೆ ಲಾರಿ ಡಿಕ್ಕಿ: ಬಾಲಕಿ ಸಾವು




ಬೆಳಗಾವಿ: ಸೈಕಲ್‌ನಲ್ಲಿ ಹೋಗುತ್ತಿದ್ದ ಬಾಲಕಿಯೊಬ್ಬಳಿಗೆ ಲಾರಿ ಡಿಕ್ಕಿ ಹೊಡೆದು ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ನಿಪ್ಪಾಣಿ ತಾಲೂಕಿನ ಗಳತಗಾ ಗ್ರಾಮದಲ್ಲಿ ನಡೆದಿದೆ. ತನ್ಮಯಿ ಲೋಕೇಶ ಪೂರ್ವೆ(10)ಸಾವನ್ನಪ್ಪಿದ ಬಾಲಕಿ. ತನ್ಮಯಿ ಗಳತಗಾ ಗ್ರಾಮದ ಭೀಮ ನಗರದಲ್ಲಿನ ಅಂಗಡಿಯಿಂದ ಸೈಕಲ್‌ನೊಂದಿಗೆ ಹಿಂತಿರುಗುತ್ತಿದ್ದಳು. ಈ ಸಮಯದಲ್ಲಿ ಜಲ್ಲಿಕಲ್ಲು ತುಂಬಿಕೊಂಡು ಲಾರಿ ಗಳತಗಾ ಗ್ರಾಮದಿಂದ ಖಡಕಲಾಟ ಗ್ರಾಮಕ್ಕೆ ಹೊರಟ ಸಂದರ್ಭದಲ್ಲಿ ಸೈಕಲ್‌ಗೆ ಡಿಕ್ಕಿ ಹೊಡೆದಿದೆ. ಇದರಲ್ಲಿ ತನ್ನಯಿ ಡಂಪರ ಕೆಳಗೆ ಸಿಲುಕಿ ಸ್ಥಳದಲ್ಲೇ ಸಾವನ್ನಪ್ಪಿದ್ದಾಳೆ. ಈ ವಿಷಯ ಅರಿತ ಕೂಡಲೇ ಚಾಲಕ ಕುಮಾರ್ ವಾಹನ ಬಿಟ್ಟು ಓಡಿ ಹೋಗಿದ್ದಾನೆ. ಈ ಕುರಿತು ಸದಲಗಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಚಿವ ಸ್ಥಾನಗಿಟ್ಟಿಸಿಕೊಳ್ಳುವಲ್ಲಿ ಎನ್‌ಎಸ್ ಬೋಸರಾಜು ಯಶಸ್ವಿ

ಮಾನವಿ : ರಾಯಚೂರು ಜಿಲ್ಲೆಯ ಹಿರಿಯ ಕಾಂಗ್ರೆಸ್ ಧುರೀಣರು ಹಾಗೂ ಎಐಸಿಸಿ ಕಾರ್ಯದರ್ಶಿಗಳಾದ ಎನ್.ಎಸ್. ಬೋಸರಾಜು ರಾಜ್ಯ ಸರ್ಕಾರದ ಸಚಿವ ಸಂಪುಟದಲ್ಲಿ ಸ್ಥಾನ ಗಿಟ್ಟಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ಎರಡು ಬಾರಿ ಶಾಸಕ ಹಾಗೂ ಒಂದು ಬಾರಿ ವಿಧಾನ ಪರಿಷತ್ ಸದಸ್ಯರಾಗಿದ್ದ ಬೋಸರಾಜು ಈಗ ಶಾಸಕ ಅಥವಾ ವಿಧಾನ ಪರಿಷತ್ತಿನ ಸದಸ್ಯರಲ್ಲ. ಅದರೂ ಕೂಡ ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಅಂತಿಮವಾಗಿ ಅವರಿಗೆ ಸಚಿವ ಸ್ಥಾನ ನೀಡಿರುವುದು ಪಕ್ಷದ ಸಂಘಟನೆಗೆ ಅವರು ಸಲ್ಲಿಸಿರುವ



ದೀರ್ಘಕಾಲದ ಸೇವೆ ಕಾರಣ ಎಂದು ತಿಳಿದು ಬಂದಿದೆ, ಬಹು ನಿರೀಕ್ಷಿತ ಸಚಿವ ಸ್ಥಾನ ಮಾನವಿ ತಾಲೂಕಿನ ಜನತೆಗೆ ಖುಷಿಯ ಸಂಗತಿ ಜೊತೆಗೆ ಸಚಿವ ಸ್ಥಾನ ಪಡೆದ ಹಿರಿಯ ಮುಖಂಡರು ಜಿಲ್ಲೆಯ ಹಾಗೂ ತಾಲೂಕಿನ ಅಭಿವೃದ್ಧಿಗೆ ಹೆಚ್ಚಿಗೆ ಮಹತ್ವ ನೀಡುವರೆಂಬ ಭರವಸೆಯನ್ನು ಕಾದುನೋಡಬೇಕಾಗಿದೆ.

## ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಪ್ರಾರಂಭಕ್ಕೆ ಶಿಕ್ಷಣ ಇಲಾಖೆ ಪೂರ್ವ ಸಿದ್ಧತೆ

ಮಾನವಿ.ಮೇ.27:– ಪ್ರತಿ ವರ್ಷದಂತೆ ಈ ವರ್ಷವು ಕೂಡ ಮಾನವಿ ತಾಲೂಕಿನಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಪ್ರಾರಂಭಕ್ಕೆ ಶಿಕ್ಷಣ ಇಲಾಖೆ ಸಿದ್ಧತೆ ಮಾಡಿಕೊಂಡಿದ್ದು ವಿದ್ಯಾರ್ಥಿಗಳಿಗೆ ಅಗತ್ಯವಾದ ಪಠ್ಯಪುಸ್ತಕ, ಸಮವಸ್ತ್ರ ಸೇರಿದಂತೆ ಇತರ ಸರಕಾರದಿಂದ ದೊರೆಯುವ ಎಲ್ಲಾ ಸೌಲಭ್ಯಗಳನ್ನು ವಿದ್ಯಾರ್ಥಿಗಳಿಗೆ ನೀಡುವುದು.

ತಾಲೂಕಿನಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಹುದ್ದೆಗಳು ಖಾಲಿ ಇದ್ದು ವಿದ್ಯಾರ್ಥಿಗಳಿಗೆ ಶಿಕ್ಷಕರ ಕೊರತೆಯಾಗದಂತೆ ಸರಕಾರದಿಂದ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿಯೇ ಅತಿಥಿ ಶಿಕ್ಷಕರನ್ನು,ಗೌರವ ಶಿಕ್ಷಕರನ್ನು ನೇಮಿಸಿಕೊಳ್ಳುವುದಕ್ಕೆ ಚಾಲನೆ ನೀಡಲಾಗಿದೆ ಈ ಬಾರಿ ಜಿಲ್ಲಾ ಶಿಕ್ಷಣ ಇಲಾಖೆಯಿಂದ ಪ್ರಾಥಮಿಕ ಶಾಲೆಗೆ 350ಕ್ಕೂ ಹೆಚ್ಚು, ಪ್ರೌಢಶಾಲೆಗೆ 90ಕ್ಕೂ ಹೆಚ್ಚು ಅತಿಥಿ ಶಿಕ್ಷಕರು ದೊರೆಯಲ್ಲಿದ್ದು ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರನ್ನು ಶಾಲೆಗಳಿಗೆ ಹಂಚಿಕೆ ಮಾಡುವ ಮೂಲಕ ಶಿಕ್ಷಕರ ಕೊರತೆ–ಯಾಗದಂತೆ ಕ್ರಮ ವಹಿಸಲಾಗುವುದು.

ಕಳೆದ ಶೈಕ್ಷಣಿಕ ವರ್ಷದ ಅವಧಿಯಲ್ಲಿ ಶಿಥಿಲವಾಗಿರುವ ಶಾಲೆಗಳನ್ನು ಗುರುತಿಸಿ ಹೊಸ ಕಟ್ಟಡಗಳನ್ನು ನಿರ್ಮಿಸಲಾಗಿದ್ದು ತಾಲೂಕಿನ ಶಾಲೆಗಳಲ್ಲಿ ಶಾಲಾ ಕೊಠಡಿಗಳ ಕೊರತೆ ಇಲ್ಲದಂತೆ ತಾಲೂಕಿನ ಶಿಥಿಲಗೊಂಡಿರುವ 5 ಶಾಲೆಗಳ, ಶಾಲಾ ಕೊಠಡಿಗಳ ದುರಸ್ತಿಗೆ 60ಲಕ್ಷ ಅನುದಾನ ಬಂದಿದ್ದು ದುರಸ್ತಿ ಕಾಮಗಾರಿ ಕೈಗೊಳ್ಳಲಾಗುವುದು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಡಿ ಚಂದ್ರಶೇಖರ್ ತಿಳಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089